

# ಸಹಾಯವು ಮೇಲಿನಿಂದಲೇ

Compiled by WATSON GOODMAN

ಉಚಿತವಾಗಿ - ಮಾರಬಾರದು

# ಸಹಾಯವು ಸಹಾಯವು

ದೇವರ ವಾಕ್ಯವು ಮೇಲಿನಿಂದಲೇ ಬರುತ್ತದೆ. ನೀತಿಗಾಗಿ ಹಸಿದು ಬಾಯಾರಿದವರಿಗೆ ಬಹಳ ಸಹಾಯವೂ, ಉಪಯೋಗವೂ ಆಗಿರುತ್ತದೆ. ಒಬ್ಬನು ತನ್ನ ಪಾಪಗಳನ್ನು ಕುರಿತು ಮಾನಸಾಂತರಪಟ್ಟಾಗ, ತಾನು ಮಾಡಿದ ಪಾಪಕ್ಕಾಗಿ ದುಃಖಪಡುತ್ತಾನೆ. ಆ ಮೇಲೆ ರಕ್ಷಕನ ಮೇಲೆ ನಂಬಿಕೆ ಇಡುತ್ತಾನೆ. ಕರ್ತನಾದ ಯೇಸು ಕ್ರಿಸ್ತನನ್ನು ತನ್ನ ಪೂರ್ಣ ಹೃದಯದಿಂದ ಅಂಗೀಕರಿಸಿದರೆ, ಆಗ ಆತನು ಅವನಲ್ಲಿ ತನ್ನನ್ನು ಪ್ರಕಟಿಸಿಕೊಂಡು, ಪೂರ್ಣ ಸಮಾಧಾನ ಸಂತೋಷಗಳನ್ನು ಕೊಡುತ್ತಾನೆ. ಇಂಥ ಅನುಭವವು 1937 ರಲ್ಲಿ ನನಗುಂಟಾಯಿತು. ಆಗಲಾಯಿತು ಅನೇಕ ವರ್ಷಗಳಿಂದಲೂ ಕರ್ತನಾದ ಯೇಸು ಕ್ರಿಸ್ತನ ಅನ್ಯೋನ್ಯತೆಯು ನನ್ನಿಂದ ತಪ್ಪಿಹೋಗಲಿಲ್ಲ. ನಿಮಗೆ ಅಂಥ ಅನುಭವ ಇನ್ನೂ ಆಗದಿದ್ದರೆ, ಈಗಲೇ ನೀವು ಆತನಿಗೆ ಒಳಗಾಗಬೇಕೆಂದು ಬೇಡಿಕೊಳ್ಳುತ್ತೇನೆ.

WATSON GOODMAN (1920-2002)

# ದೇವರ ಪ್ರೀತಿ



ಆದರೆ ನಾವು ಪಾಪಿಗಳಾಗಿದ್ದಾಗಲೂ ಕ್ರಿಸ್ತನು ನಮಗೋಸ್ಕರ ಪ್ರಾಣಕೊಟ್ಟದ್ದರಲ್ಲಿ ದೇವರು ನಮ್ಮ ಮೇಲೆ ತನಗಿರುವ ಪ್ರೀತಿಯನ್ನು ಸಿದ್ಧಾಂತಪಡಿಸಿದ್ದಾನೆ. **— ರೋಮಾಪುರದವರಿಗೆ 5:8**

ನಂಬತಕ್ಕ ಸಾಕ್ಷಿಯೂ ಸತ್ತವರೊಳಗಿಂದ ಮೊದಲು ಎದ್ದುಬಂದವನೂ ಭೂರಾಜರ ಒಡೆಯನೂ ಆಗಿರುವ ಯೇಸು ಕ್ರಿಸ್ತನಿಂದ ನಿಮಗೆ ಕೃಪೆಯೂ ಶಾಂತಿಯೂ ಆಗಲಿ. ನಮ್ಮನ್ನು ಪ್ರೀತಿಸುವವನೂ ತನ್ನ ರಕ್ತದ ಮೂಲಕ ನಮ್ಮನ್ನು ಪಾಪಗಳಿಂದ ಬಿಡಿಸಿದವನು ಆಗಿರುವಾತನಿಗೆ........ **— ಪ್ರಕಟನೆ 1:5**



ದೇವರು ಲೋಕದ ಮೇಲೆ ಎಷ್ಟೋ ಪ್ರೀತಿಯನ್ನಿಟ್ಟು ತನ್ನ ಒಬ್ಬನೇ ಮಗನನ್ನು ಕೊಟ್ಟನು; ಆತನನ್ನು ನಂಬುವ ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಪಡೆಯಬೇಕೆಂದು ಆತನನ್ನು ಕೊಟ್ಟನು. **— ಯೋಹಾನ 3:16**

# ಯೇಸು ಕ್ರಿಸ್ತನ ವ್ಯಕ್ತಿತ್ವ

## 1 ತಿಮೊಥಿ 3:16

ದೇವಭಕ್ತಿಗೆ ಆಧಾರವಾಗಿರುವ ಸತ್ಯಾರ್ಥವು ಗಂಭೀರವಾದದ್ದೆಂಬದಕ್ಕೆ ನಾವೆಲ್ಲರೂ ಒಪ್ಪಿಕೊಳ್ಳುತ್ತೇವೆ; ಅದೇನಂದರೆ – ಕ್ರಿಸ್ತನು ಶರೀರಧಾರಿಯಾಗಿ ಪ್ರತ್ಯಕ್ಷನಾದನು; ಆತ್ಮ ಸಂಬಂಧವಾಗಿ ಕ್ರಿಸ್ತನೇ ಎಂದು ಸ್ಥಾಪಿಸಲ್ಪಟ್ಟನು; ದೇವದೂತರಿಗೆ ಕಾಣಿಸಿಕೊಂಡನು; ಅನ್ಯ ಜನರಲ್ಲಿ ಪ್ರಸಿದ್ಧಿಮಾಡಲ್ಪಟ್ಟನು; ಲೋಕದಲ್ಲಿ ನಂಬಲ್ಪಟ್ಟನು; ಪ್ರಭಾವಸ್ಥಾನದಲ್ಲಿ ಸೇರಿಸಲ್ಪಟ್ಟನು.

## ಮತ್ತಾಯ 1:22,23

ಕರ್ತನು ಪ್ರವಾದಿಯ ಮುಖಾಂತರ ಹೇಳಿದ ಮಾತು ನೆರವೇರುವಂತೆ ಇದೆಲ್ಲಾ ನಡೆಯಿತು; ಆ ಮಾತು ಏನಂದರೆ – ಇಗೋ, ಒಬ್ಬ ಕನ್ನಿಕೆಯು ಗರ್ಭಿಣಿಯಾಗಿ ಮಗನನ್ನು ಹಡೆಯುವಳು; ಆತನಿಗೆ ಇಮ್ಮಾನುವೇಲ್ ಎಂದು ಹೆಸರಿಡುವರು ಎಂಬದು. ದೇವರು ನಮ್ಮ ಕೂಡ ಇದ್ದಾನೆಂದು ಈ ಹೆಸರಿನ ಅರ್ಥ.

# ಯೇಸು, ದೇವರ ಮಗನು



## ಯೆಶಾಯ 9:6

ಒಂದು ಮಗು ನಮಗಾಗಿ ಹುಟ್ಟಿದೆಯಷ್ಟೆ, ವರದ ಮಗನು ನಮಗೆ ದೊರೆತನು; ಆಡಳಿತವು ಅವನ ಬಾಹುವಿನ ಮೇಲಿರುವದು; ಅದ್ಭುತಸ್ವರೂಪನು, ಆಲೋಚನಾಕರ್ತನು, ಪರಾಕ್ರಮಿಯಾದ ದೇವರು, ನಿತ್ಯನಾದ ತಂದೆ, ಸಮಾಧಾನದ ಪ್ರಭು ಎಂಬವು ಅವನ ಹೆಸರು.

## 1 ಯೋಹಾನ 4:15

ಯೇಸು ದೇವರ ಮಗನಾಗಿದ್ದಾನೆಂದು ಯಾವನು ಒಪ್ಪಿಕೊಂಡು ಹೇಳುತ್ತಾನೋ ಅವನಲ್ಲಿ ದೇವರು ನೆಲೆಗೊಂಡಿದ್ದಾನೆ. ಅವನು ದೇವರಲ್ಲಿ ನೆಲೆಗೊಂಡಿದ್ದಾನೆ.

## ಕೊಲೊಸ್ಸೆಯವರಿಗೆ 2:9

ಕ್ರಿಸ್ತನಲ್ಲಿಯೇ ದೇವರ ಸರ್ವ ಸಂಪೂರ್ಣತೆಯು ಅವತರಿಸಿ ವಾಸಮಾಡುತ್ತದೆ.

# ಯೇಸು, ತಾನು ಯಾರೆಂಬದನ್ನು ತಿಳಿಸುತ್ತಾನೆ

## ಯೋಹಾನ 10:7

ಆದಕಾರಣ ಯೇಸು ಮತ್ತೂ, ಅವರಿಗೆ – ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಕುರಿಗಳಿಗೆ ನಾನೇ ಬಾಗಲಾಗಿದ್ದೇನೆ.

## ಯೋಹಾನ 6:35

ಯೇಸು ಅವರಿಗೆ – ಜೀವಕೊಡುವ ರೊಟ್ಟಿ ನಾನೇ; ನನ್ನ ಬಳಿಗೆ ಬರುವವನಿಗೆ ಎಂದಿಗೂ ಹಸಿವೆಯಾಗುವದಿಲ್ಲ, ನನ್ನನ್ನು ನಂಬುವವನಿಗೆ ಎಂದಿಗೂ ನೀರಡಿಕೆ ಯಾಗುವದಿಲ್ಲ.

## ಯೋಹಾನ 11:25

ಯೇಸು ಅಕೆಗೆ – ನಾನೇ ಪುನರುತ್ಥಾನವೂ ಜೀವವೂ ಆಗಿದ್ದೇನೆ; ನನ್ನನ್ನು ನಂಬುವನು ಸತ್ತರೂ ಬದುಕುವನು........ ಎಂದು ಹೇಳಿದನು.

# ಯೇಸು ಮಾಡಿದ ಕೆಲವು ಅದ್ಭುತ ಕಾರ್ಯಗಳು

ಆಗ ದಾರಿಯ ಮಗ್ಗುಲಲ್ಲಿ ಕೂತಿದ್ದ ಇಬ್ಬರು ಕುರುಡರು, ಯೇಸು ಈ ಮಾರ್ಗವಾಗಿ ಹೋಗುತ್ತಿದ್ದಾನೆಂದು ಕೇಳಿ – ಸ್ವಾಮಿ, ದಾವೀದನ ಕುಮಾರನೇ, ನಮ್ಮನ್ನು ಕರುಣಿಸು ಎಂದು ಕೂಗಿಕೊಂಡರು, .... ಆಗ ಯೇಸು ಕನಿಕರಪಟ್ಟು ಅವರ ಕಣ್ಣುಗಳನ್ನು ಮುಟ್ಟಿದನು. ಕೂಡಲೆ ಅವರಿಗೆ ಕಣ್ಣುಬಂದವು, ಅವರು ಆತನ ಹಿಂದೆ ಹೋದರು. **ಮತ್ತಾಯ 20:30,34**

ಮಾತಾಡುವದನ್ನು ಮುಗಿಸಿದ ಮೇಲೆ ಸೀಮೋನನಿಗೆ – ಆಳವಾದ ಸ್ಥಳಕ್ಕೆ ದೋಣಿಯನ್ನು ನಡಿಸಿ ಮೀನುಬೇಟೆಗಾಗಿ ನಿಮ್ಮ ಬಲೆಗಳನ್ನು ಹಾಕಿರಿ ಎಂದು ಹೇಳಿದನು. ಅದಕ್ಕೆ ಸೀಮೋನನು – ಗುರುವೇ ನಾವು ರಾತ್ರಿಯೆಲ್ಲಾ ಪ್ರಯಾಸಪಟ್ಟರೂ ಏನೂ ಸಿಕ್ಕಲಿಲ್ಲ; ಆದರೆ ನಿನ್ನ ಮಾತಿನ ಮೇಲೆ ಬಲೆಗಳನ್ನು ಹಾಕುತ್ತೇನೆ ಅಂದನು. ಹಾಕಿದ ಮೇಲೆ ಮೀನುಗಳು ರಾಶಿರಾಶಿಯಾಗಿ ಸಿಕ್ಕಿಕೊಂಡು ಅವರ ಬಲೆಗಳು ಹರಿದುಹೋಗುತ್ತಿದ್ದವು. **ಲೂಕ 5:4–6**

# 6 ಯೇಸು ಕ್ರಿಸ್ತನು ಸೃಷ್ಟಿಕರ್ತನೂ ಮತ್ತು ಒಡೆಯನೂ ಆಗಿದ್ದಾನೆ

**ಕೊಲೊಸ್ಸೆಯವರಿಗೆ 1:16**

ಭೂಪರಲೋಕಗಳಲ್ಲಿರುವ ದೃಶ್ಯಾದೃಶ್ಯವಾದವುಗಳೆಲ್ಲವೂ ಸಿಂಹಾಸನಗಳಾಗಲಿ ಪ್ರಭುತ್ವಗಳಾಗಲಿ ಧೊರೆತನಗಳಾಗಲಿ ಅಧಿಕಾರಗಳಾಗಲಿ ಆತನಲ್ಲಿ ಸೃಷ್ಟಿಸಲ್ಪಟ್ಟವು. ಸರ್ವವು ಆತನ ಮುಖಾಂತರವಾಗಿಯೂ ಆತನಿಗೋಸ್ಕರವಾಗಿಯೂ ಸೃಷ್ಟಿಸಲ್ಪಟ್ಟಿತು.

**ಯೋಹಾನ 1:3**

ಆತನ ಮೂಲಕವಾಗಿ ಸಮಸ್ತವು ಉಂಟಾಯಿತು; ಉಂಟಾಗಿರುವ ವಸ್ತುಗಳಲ್ಲಿ ಆತನಿಲ್ಲದೆ ಒಂದಾದರೂ ಉಂಟಾಗಲಿಲ್ಲ.

**ಅ.ಕೃ. 2:36**

ಆದದರಿಂದ ನೀವು ಶಿಲುಬೆಗೆ ಹಾಕಿಸಿದ ಈ ಯೇಸುವನ್ನೇ ದೇವರು ಒಡೆಯನನ್ನಾಗಿಯೂ ಕ್ರಿಸ್ತನನ್ನಾಗಿಯೂ ಮಾಡಿದ್ದಾನೆಂಬದು ಇಸ್ರಾಯೇಲ್ ಕುಲದವರಿಗೆಲ್ಲಾ ನಿಸ್ಸಂದೇಹವಾಗಿ ತಿಳಿದಿರಲಿ ಎಂದು ಹೇಳಿದನು.

# ಯೇಸು ಕ್ರಿಸ್ತನು ಎಲ್ಲರ ನ್ಯಾಯದೀಶನಾಗಿದ್ದಾನೆ

ಇದಲ್ಲದೆ ತಂದೆಯು ಯಾರಿಗೂ ತೀರ್ಪುಮಾಡುವದೂ ಇಲ್ಲ; ತೀರ್ಪುಮಾಡುವ ಅಧಿಕಾರವನ್ನೆಲ್ಲಾ ಮಗನಿಗೆ ಕೊಟ್ಟಿದ್ದಾನೆ. **— ಯೋಹಾನ 5:22**



ಆತನೇ ಜೀವಿತರಿಗೂ ಸತ್ತವರಿಗೂ ನ್ಯಾಯಾಧಿಪತಿಯಾಗಿ ದೇವರಿಂದ ನೇಮಕವಾದವನು ಎಂಬದನ್ನು ಜನರಿಗೆ ಸಾರಿ ಸಾಕ್ಷಿಹೇಳಬೇಕೆಂದು ದೇವರು ನಮಗೆ ಅಪ್ಪಣೆಕೊಟ್ಟನು. **— ಅ.ಕೃ. 10:42**

ತಿನ್ನದವನೇ, ನಿನ್ನ ಸಹೋದರನ ವಿಷಯವಾಗಿ ನೀನು ತೀರ್ಪುಮಾಡುವದೇನು? ತಿನ್ನುವವನೇ, ನಿನ್ನ ಸಹೋದರನನ್ನು ನೀನು ಹೀನೈಸುವದೇನು? ನಾವೆಲ್ಲರೂ ದೇವರ ನ್ಯಾಯಾಸನದ ಮುಂದೆ ನಿಲ್ಲಬೇಕಲ್ಲಾ. **— ರೋಮಾಪುರದವರಿಗೆ 14:10**

# ವಿಮೋಚನೆಯು, ಕ್ರಿಸ್ತನ ಮುಖಾಂತರವೇ

## ಇಬ್ರಿಯ 5:9

ಇದಲ್ಲದೆ ಆತನು ಸಿದ್ಧಿಗೆ ಬಂದು ದೇವರಿಂದ ಮೆಲ್ಕಿಜೆದೇಕನ ತರಹದ ಮಹಾ ಯಾಜಕನೆನಿಸಿಕೊಂಡವನಾಗಿ ತನಗೆ ವಿಧೇಯರಾಗಿರುವವರೆಲ್ಲರಿಗೂ ನಿರಂತರವಾದ ರಕ್ಷಣೆಗೆ ಕಾರಣನಾದನು.

## ಅ.ಕೃ. 4:12

ಬರಬೇಕಾದ ರಕ್ಷಣೆಯು ಇನ್ನಾರಲ್ಲಿಯೂ ಸಿಕ್ಕುವದಿಲ್ಲ; ಆ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ ಮನುಷ್ಯರೊಳಗೆ ಕೊಡಲ್ಪಟ್ಟಿರುವ ಬೇರೆ ಯಾವ ಹೆಸರಿನಿಂದಲೂ ನಮಗೆ ರಕ್ಷಣೆಯಾಗುವದಿಲ್ಲ ಎಂದು ಹೇಳಿದನು.

## ಯೋಹಾನ 14:6

ಯೇಸು ಅವನಿಗೆ – ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ; ನನ್ನ ಮೂಲಕವಾಗಿ ಹೊರತು ಯಾರೂ ತಂದೆಯ ಬಳಿಗೆ ಬರುವದಿಲ್ಲ.

# ವಿಮೋಚನೆಯು, ಕ್ರಿಸ್ತನ ಮುಖಾಂತರನೇ

## ಲೂಕ 19:10

ಮನುಷ್ಯಕುಮಾರನು ಕೆಟ್ಟುಹೋಗಿರುವದನ್ನು ಹುಡುಕಿ ರಕ್ಷಿಸುವದಕ್ಕೆ ಬಂದನು ಎಂದು ಹೇಳಿದನು.

## ತೀತ 2:14

ಆತನು ನಮ್ಮನ್ನು ಸಕಲ ಅಧರ್ಮದಿಂದ ವಿಮೋಚಿಸುವದಕ್ಕೂ ಸತ್ಕ್ರಿಯೆಗಳಲ್ಲಿ ಆಸಕ್ತರಾದ ಸ್ವಕೀಯಜನರನ್ನು ತನಗಾಗಿ ಪರಿಶುದ್ಧ ಮಾಡುವದಕ್ಕೂ ನಮಗೋಸ್ಕರ ತನ್ನನ್ನು ಒಪ್ಪಿಸಿಕೊಟ್ಟನು.

## ಕೊಲೊಸ್ಸೆಯವರಿಗೆ 1:12–14

ಬೆಳಕಿನ ರಾಜ್ಯದೊಳಗೆ ದೇವಜನರ ಬಾಧ್ಯತೆಯಲ್ಲಿ ಪಾಲುಗಾರರಾಗುವದಕ್ಕೆ ನಿಮ್ಮನ್ನು ಯೋಗ್ಯರನ್ನಾಗಿ ಮಾಡಿದ ತಂದೆಗೆ ಕೃತಜ್ಞತಾಸ್ತುತಿ ಮಾಡುವವರಾಗಿರಬೇಕೆಂತಲೂ ದೇವರನ್ನು ಬೇಡಿಕೊಳ್ಳುತ್ತೇವೆ. ದೇವರು ನಮ್ಮನ್ನು ಅಂಧಕಾರದ ಧೊರೆತನದಿಂದ ಬಿಡಿಸಿ ತನ್ನ ಪ್ರಿಯ ಕುಮಾರನ ರಾಜ್ಯದೊಳಗೆ ಸೇರಿಸಿದನು. ಆ ಕುಮಾರನಲ್ಲಿ ನಮ್ಮ ಪಾಪಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು.

# ಕ್ರಿಸ್ತನ ರಕ್ತದ ಶುದ್ಧೀಕರಣ

## ಇಬ್ರಿಯ 9:14

ನಿತ್ಯಾತ್ಮನಿಂದ ತನ್ನನ್ನು ತಾನೇ ನಿರ್ದೋಷಿಯನ್ನಾಗಿ ದೇವರಿಗೆ ಸಮರ್ಪಿಸಿಕೊಂಡ ಕ್ರಿಸ್ತನ ರಕ್ತವು ಎಷ್ಟೋ ಹೆಚ್ಚಾಗಿ ನಮ್ಮನ್ನು ನಿರ್ಜೀವಕರ್ಮಗಳಿಂದ ಬಿಡಿಸಿ ನಾವು ಜೀವವುಳ್ಳ ದೇವರನ್ನು ಆರಾಧಿಸುವವರಾಗುವಂತೆ ನಮ್ಮ ಮನಸ್ಸನ್ನು ಶುದ್ಧೀಕರಿಸುವದಲ್ಲವೇ.

## 1 ಯೋಹಾನ 1:7

ಆದರೆ ಆತನು ಬೆಳಕಿನಲ್ಲಿರುವಂತೆಯೇ ನಾವು ಬೆಳಕಿನಲ್ಲಿ ನಡೆದರೆ ನಾವು ಒಬ್ಬರ ಸಂಗಡಲೊಬ್ಬರು ಅನ್ಯೋನ್ಯತೆಯಲ್ಲಿದ್ದೇವೆ, ಮತ್ತು ಆತನ ಮಗನಾದ ಯೇಸುವಿನ ರಕ್ತವು. ಸಕಲಪಾಪವನ್ನು ನಿವಾರಣಮಾಡಿ ನಮ್ಮನ್ನು ಶುದ್ಧಿ ಮಾಡುತ್ತದೆ.

## ಎಫೆಸದವರಿಗೆ 1:7

ಈತನು ನಮಗೋಸ್ಕರ ತನ್ನ ರಕ್ತವನ್ನು ಸುರಿಸಿದ್ದರಿಂದ ನಮ್ಮ ಅಪರಾಧಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು.

# ನಂಬಿಕೆಯಿಂದಾದ ರಕ್ಷಣೆ ಕ್ರಿಸ್ತನಲ್ಲಿಯೇ

## ಎಫೆಸದವರಿಗೆ 2:8,9

ನಂಬಿಕೆಯ ಮೂಲಕ ಕೃಪೆಯಿಂದಲೇ ರಕ್ಷಣೆಹೊಂದಿದವರಾಗಿದ್ದೀರಿ. ಆ ರಕ್ಷಣೆಯು ನಿಮ್ಮಿಂದುಂಟಾದದ್ದಲ್ಲ, ಅದು ದೇವರ ವರವೇ, ಅದು ಪುಣ್ಯಕ್ರಿಯೆಗಳಿಂದ ಉಂಟಾದದ್ದಲ್ಲ. ಆದದರಿಂದ ಹೊಗಳಿಕೊಳ್ಳುವದಕ್ಕೆ ಯಾರಿಗೂ ಆಸ್ಪದವಿಲ್ಲ.

## 1 ಯೋಹಾನ 5:4

ದೇವರಿಂದ ಹುಟ್ಟಿರುವಂಥದೆಲ್ಲವು ಲೋಕವನ್ನು ಜಯಿಸುತ್ತದೆ. ಲೋಕವನ್ನು ಜಯಿಸಿದಂಥದು ನಮ್ಮ ನಂಬಿಕೆಯೇ.

## ಯೋಹಾನ 6:28,29

ಅವರು – ದೇವರಿಗೆ ಮೆಚ್ಚಿಕೆಯಾದ ಕೆಲಸಗಳನ್ನು ನಾವು ನಡಿಸಬೇಕಾದರೆ ಏನು ಮಾಡಬೇಕೆಂದು ಆತನನ್ನು ಕೇಳಿದ್ದಕ್ಕೆ ಯೇಸು – ದೇವರು ಮೆಚ್ಚುವ ಕೆಲಸ ಯಾವದಂದರೆ ಆತನು ಕಳುಹಿಸಿಕೊಟ್ಟವನನ್ನು ನೀವು ನಂಬುವದೇ ಅಂದನು.

# ದೇವರ ಕರುಣೆ

**ತೀತ 3:5**

ನಾವು ಮಾಡಿದ ಪುಣ್ಯಕ್ರಿಯೆಗಳ ನಿಮಿತ್ತದಿಂದಲ್ಲ ಆತನ ಕರುಣೆಯಲ್ಲಿಯೇ ಪುನರ್ಜನ್ಮವನ್ನು ಸೂಚಿಸುವ ಸ್ನಾನದ ಮೂಲಕವಾಗಿಯೂ ಪವಿತ್ರಾತ್ಮನು ನಮ್ಮಲ್ಲಿ ನೂತನ ಸ್ವಭಾವವನ್ನು ಉಂಟುಮಾಡುವದರ ಮೂಲಕವಾಗಿಯೂ ಆತನು ನಮ್ಮನ್ನು ರಕ್ಷಿಸಿದನು.

**ಕೀರ್ತನೆ 108:4**

ಯಾಕಂದರೆ ನಿನ್ನ ಕೃಪೆಯು ಆಕಾಶಕ್ಕಿಂತ ದೊಡ್ಡದಾಗಿದೆ. ನಿನ್ನ ಸತ್ಯತೆಯು ಮುಗಿಲನ್ನು ನಿಲುಕುತ್ತದೆ.

**ಕೀರ್ತನೆ 103:17**

ಆದರೆ ಯೆಹೋವನಲ್ಲಿ ಭಯಭಕ್ತಿಯುಳ್ಳವರ ಮೇಲೆ ಆತನ ದಯವು ಯುಗ ಯುಗಾಂತರಗಳ ವರೆಗೂ ಇರುತ್ತದೆ.

**ಕೀರ್ತನೆ 103:11**

ಭೂಮಿಯ ಮೇಲೆ ಆಕಾಶವು ಎಷ್ಟು ಉನ್ನತವೋ ಆತನಲ್ಲಿ ಭಯಭಕ್ತಿ ಯುಳ್ಳವರ ಮೇಲೆ ಆತನ ಕೃಪೆಯು ಅಷ್ಟು ಅಪಾರವಾಗಿದೆ.

# ದೇವರು ತನ್ನ ಬಳಿಗೆ ಬರುವಂತೆ ಕರೆಯುತ್ತಾನೆ



### ಪ್ರಕಟನೆ 22:17

ಆತ್ಮನೂ ಮದಲಗಿತ್ತಿಯೂ – ಬಾ ಅನ್ನುತ್ತಾರೆ. ಕೇಳುವವನೂ – ಬಾ ಅನ್ನಲಿ. ಬಾಯಾರಿದವನು ಬರಲಿ. ಇಷ್ಟವುಳ್ಳವನು ಜೀವಜಲವನ್ನು ಕ್ರಯವಿಲ್ಲದೆ ತೆಗೆದುಕೊಳ್ಳಲಿ.

### ಯೆಶಾಯ 1:18

ಬನ್ನಿರಿ, ವಾದಿಸುವ ಎಂದು ಯೆಹೋವನು ಅನ್ನುತ್ತಾನೆ; ನಿಮ್ಮ ಪಾಪಗಳು ಕಡು ಕೆಂಪಾಗಿದ್ದರೂ ಹಿಮದ ಹಾಗೆ ಬಿಳುಪಾಗುವವು; ಕಿರಮಂಜಿಬಣ್ಣವಾಗಿದ್ದರೂ ಉಣ್ಣೆಯಂತೆ ಬೆಳ್ಳಗಾಗುವವು.

### ಮತ್ತಾಯ 11:28

ಎಲ್ಲೈ ಕಷ್ಟಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ; ನಾನು ನಿಮಗೆ ವಿಶ್ರಾಂತಿಕೊಡುವೆನು.

# ಎಲ್ಲರೂ ದೇವರ ಮಕ್ಕಳಲ್ಲ

## 1 ಯೋಹಾನ 3:10

ಇವರು ದೇವರ ಮಕ್ಕಳೆಂಬದೂ ಅವರು ಸೈತಾನನ ಮಕ್ಕಳೆಂಬದೂ ಇದರಿಂದ ವ್ಯಕ್ತವಾಗುತ್ತದೆ, ನೀತಿಯನ್ನು ಅನುಸರಿಸದವನೂ ತನ್ನ ಸಹೋದರನನ್ನು ಪ್ರೀತಿಸದವನೂ ದೇವರಿಂದ ಹುಟ್ಟಿದವರಲ್ಲ.

## ಯೋಹಾನ 1:12

ಯಾರಾರು ಆತನನ್ನು ಅಂಗೀಕರಿಸಿದರೋ, ಅಂದರೆ ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ, ಅವರಿಗೆ ದೇವರ ಮಕ್ಕಳಾಗುವ ಅಧಿಕಾರ ಕೊಟ್ಟನು.

## ರೋಮಾಪುರದವರಿಗೆ 8:14, 15

ಯಾರಾರು ದೇವರ ಆತ್ಮನಿಂದ ನಡಿಸಿಕೊಳ್ಳುತ್ತಾರೋ ಅವರು ದೇವರ ಮಕ್ಕಳು. ನೀವು ತಿರಿಗಿ ಭಯದಲ್ಲಿ ಬೀಳುವ ಹಾಗೆ ದಾಸನ ಭಾವವನ್ನು ಹೊಂದಿದವರಲ್ಲ, ಮಗನ ಭಾವವನ್ನು ಹೊಂದಿದವರಾಗಿದ್ದೀರಿ, ಈ ಭಾವದಿಂದ ನಾವು ದೇವರನ್ನು ಅಪ್ಪಾ, ತಂದೆಯೇ, ಎಂದು ಕೂಗುತ್ತೇವೆ.

## ಯೆಶಾಯ 5:11

ಅಯ್ಯೋ, ಮದ್ಯದ ಗೀಳಿನಿಂದಲೇ ಮುಂಜಾನೆ ಎದ್ದು ಸಂಜೆಯಾದ ಮೇಲೆಯೂ ದ್ರಾಕ್ಷಾರಸದಿಂದ ಅಮಲೇರಿದವರಾಗಿ ಕಾಲಕಳೆಯುವವರ ಪಾಡು ಏನು ಹೇಳಲಿ!

## ಗಲಾತ್ಯದವರಿಗೆ 5:19, 21

ಶರೀರಭಾವದ ಕರ್ಮಗಳು ಪ್ರಸಿದ್ಧವಾಗಿಯೇ ಅವೆ; ಯಾವವಂದರೆ–ಜಾರತ್ವ ಬಂಡುತನ ನಾಚಿಕೆಗೇಡಿತನ ವಿಗ್ರಹಾರಾಧನೆ ಮಾಟ ಹಗೆತನ ಜಗಳ ಹೊಟ್ಟೇಕಿಚ್ಚು ಸಿಟ್ಟು ಕಕ್ಷಭೇದ ಭಿನ್ನಮತ. ಮತ್ಸರ ಕುಡಿಕತನ ದುಂದೌತನ ಇಂಥವುಗಳೇ ಇವುಗಳ ವಿಷಯದಲ್ಲಿ – ಇಂಥ ಕಾರ್ಯಗಳನ್ನು ನಡಿಸುವವರು ದೇವರ ರಾಜ್ಯಕ್ಕೆ ಬಾಧ್ಯರಾಗುವದಿಲ್ಲವೆಂದು ನಾನು ಹಿಂದೆ ಹೇಳಿದಂತೆಯೇ ಈಗಲೂ ನಿಮ್ಮನ್ನು ಎಚ್ಚರಿಸುತ್ತೇನೆ.

# ಸರಳತೆಯೇ ಸಾಕಿಲ್ಲ

## ಮಾರ್ಕ 10:17-22

ಆತನು ಹೊರಟು ದಾರಿಹಿಡಿದು ಹೋಗುವಾಗ ಒಬ್ಬನು ಓಡುತ್ತಾ, ಆತನ ಎದುರಿಗೆ ಬಂದು ಮೊಣಕಾಲೂರಿ - ಒಳ್ಳೇ ಬೋಧಕನೇ, ನಾನು ನಿತ್ಯ ಜೀವಕ್ಕೆ ಬಾಧ್ಯಸ್ಥನಾಗಬೇಕಾದರೆ ಏನು ಮಾಡಬೇಕೆಂದು ಆತನನ್ನು ಕೇಳಲಾಗಿ ಯೇಸು ಅವನಿಗೆ-ನನ್ನನ್ನು ಒಳ್ಳೆಯನೆಂದು ಯಾಕೆ ಹೇಳುತ್ತೀ? ದೇವರೊಬ್ಬನೇ ಹೊರತು ಮತ್ತಾವನೂ ಒಳ್ಳೆಯವನಲ್ಲ. ನರಹತ್ಯ ಮಾಡಬಾರದು; ವ್ಯಭಿಚಾರಮಾಡಬಾರದು; ಕದಿಯಬಾರದು; ಸುಳ್ಳುಸಾಕ್ಷಿ ಹೇಳಬಾರದು; ಮೋಸಮಾಡಬಾರದು; ನಿನ್ನ ತಂದೆತಾಯಿಗಳನ್ನು ಸನ್ಮಾನಿಸಬೇಕು ಎಂಬ ದೇವರಾಜ್ಞೆಗಳು ನಿನಗೆ ಗೊತ್ತಿವೆಯಷ್ಟೆ ಎಂದು ಹೇಳಿದನು. ಅವನು ಆತನಿಗೆ-ಬೋಧಕನೇ, ನಾನು ಚಿಕ್ಕಂದಿನಿಂದಲೂ ಇವೆಲ್ಲಕ್ಕೂ ಸರಿಯಾಗಿ ನಡಕೊಂಡು ಬಂದಿದ್ದೇನೆ ಎಂದು ಹೇಳಲು ಯೇಸು ಅವನನ್ನು ದೃಷ್ಟಿಸಿನೋಡಿ ಪ್ರೀತಿಸಿ ಅವನಿಗೆ - ನಿನಗೆ ಒಂದು ಕಡಿಮೆಯಾಗಿದೆ; ಹೋಗು, ನಿನ್ನ ಬದುಕನ್ನೆಲ್ಲಾ ಮಾರಿ ಬಡವರಿಗೆ ಕೊಡು; ಪರಲೋಕದಲ್ಲಿ ಸಂಪತ್ತಿರುವದು; ನೀನು ಬಂದು ನನ್ನನ್ನು ಹಿಂಬಾಲಿಸು ಎಂದು ಹೇಳಿದನು. ಆದರೆ

ಅವನು ಬಹಳ ಆಸ್ತಿಯುಳ್ಳವನಾಗಿದ್ದದರಿಂದ ಈ ಮಾತಿಗೆ ಮೋರೆ ಬಾಡಿದವನಾಗಿ ದುಃಖದಿಂದ ಹೊರಟು ಹೋದನು.

## ಮೋಸಹೋಗಬೇಡಿರಿ

### 1 ಕೊರಿಂಥದವರಿಗೆ 6:9,10

ಅನ್ಯಾಯಗಾರರು ದೇವರ ರಾಜ್ಯಕ್ಕೆ ಬಾಧ್ಯರಾಗುವದಿಲ್ಲವೆಂಬದು ನಿಮಗೆ ತಿಳಿಯದೋ? ಮೋಸಹೋಗಬೇಡಿರಿ, ಜಾರರೂ ವಿಗ್ರಹಾರಾಕರು ವ್ಯಭಿಚಾರಿಗಳು ವಿಟರು ಪುರುಷಗಾಮಿಗಳು ಕಳ್ಳರು ಲೋಭಿಗಳು ಕುಡಿಕರು ಬೈಯುವವರು ಸುಲುಕೊಳ್ಳುವವರು ಇವರೊಳಗೆ ಒಬ್ಬರಾದರೂ ದೇವರ ರಾಜ್ಯಕ್ಕೆ ಬಾಧ್ಯರಾಗುವ ದಿಲ್ಲ.

### ಎಫೆಸದವರಿಗೆ 5:6

ಹುರುಳಿಲ್ಲದ ಮಾತುಗಳನ್ನಾಡುವವರಿಗೆ ಕಿವಿಗೊಟ್ಟು ಮೋಸಹೋಗಬೇಡಿರಿ; ಅಂಥ ಕೃತ್ಯಗಳ ನಿಮಿತ್ತದಿಂದ ದೇವರ ಕೋಪವು ಆತನಿಗೆ ಅವಿಧೇಯರಾಗಿರುವವರ ಮೇಲೆ ಬರುತ್ತದೆ. ನೀವು ಅವರೊಂದಿಗೆ ಪಾಲುಗಾರರಾಗಿರಬೇಡಿರಿ.

# ಪಾಪವು ಮರಣವನ್ನುಂಟುಮಾಡುತ್ತದೆ

## ರೋಮಾಪುರದವರಿಗೆ 5:12

ಈ ವಿಷಯ ಹೇಗಂದರೆ– ಒಬ್ಬ ಮನುಷ್ಯನಿಂದಲೇ ಪಾಪವೂ ಪಾಪದಿಂದ ಮರಣವೂ ಲೋಕದೊಳಗೆ ಸೇರಿದವು; ಎಲ್ಲರು ಪಾಪಮಾಡಿದ್ದರಿಂದ ಮರಣವು ಹೀಗೆ ಎಲ್ಲರಲ್ಲಿಯೂ ವ್ಯಾಪಿಸಿತು.

## ಯಾಕೋಬ 1:15

ಆ ಮೇಲೆ ಆಶೆಯು ಬಸುರಾಗಿ ಪಾಪವನ್ನು ಹೆರುತ್ತದೆ; ಪಾಪವು ತುಂಬಾ ಬೆಳೆದು ಮರಣವನ್ನು ಹಡೆಯುತ್ತದೆ.

## ಜ್ಞಾನೋಕ್ತಿ 11:19

ಧರ್ಮನಿರತನಿಗೆ ಜೀವ, ಅಧರ್ಮಾಸಕ್ತನಿಗೆ ಮರಣ.

## ಲೂಕ 15:32

ಆದರೆ ಉಲ್ಲಾಸಪಡುವದೂ ಸಂತೋಷಗೊಳ್ಳುವದೂ ನ್ಯಾಯವಾದದ್ದೇ; ಯಾಕಂದರೆ ಈ ನಿನ್ನ ತಮ್ಮ ಸತ್ತವನಾಗಿದ್ದನು, ತಿರಿಗಿ ಬದುಕಿ ಬಂದನು; ಪೋಲಿ ಹೋಗಿದ್ದನು, ಸಿಕ್ಕಿದನು ಎಂದು ಹೇಳಿದನು.

# ಕ್ರಿಸ್ತನು ಮರಣವನ್ನು ಗೆದ್ದನು 

## ಯೋಹಾನ 11:43,44

ಅದನ್ನು ಹೇಳಿದ ಮೇಲೆ ದೊಡ್ಡ ಶಬ್ದದಿಂದ - ಲಾಜರನೇ, ಹೊರಗೆ ಬಾ ಎಂದು ಕೂಗಿದನು. ಸತ್ತಿದ್ದವನು ಹೊರಗೆ ಬಂದನು; ಅವನ ಕೈ ಕಾಲುಗಳು ಬಟ್ಟೆಗಳಿಂದ ಕಟ್ಟಿದ್ದವು, ಅವನ ಮುಖವು ಕೈಪಾವಡದಿಂದ ಸುತ್ತಿತ್ತು. ಯೇಸು ಅವರಿಗೆ- ಅವನನ್ನು ಬಿಚ್ಚಿರಿ, ಹೋಗಲಿ ಎಂದು ಹೇಳಿದನು.

## ಪ್ರಕಟನೆ 1:18

ಸತ್ತವನಾದೆನು, ಮತ್ತು ಇಗೋ ಯುಗಯುಗಾಂತರಗಳಲ್ಲಿಯೂ ಬದುಕುವವನಾಗಿದ್ದೇನೆ; ಮರಣದ ಮತ್ತು ಪಾತಾಳದ ಬೀಗದ ಕೈಗಳು ನನ್ನಲ್ಲಿ ಅವೆ.

## ಲೂಕ 7:14, 15

ಯೇಸು ಚಟ್ಟದ ಹತ್ತಿರಕ್ಕೆ ಹೋಗಿ ಅದನ್ನು ಮುಟ್ಟಲು ಹೊತ್ತುಕೊಂಡವರು ನಿಂತರು. ಆಗ ಆತನು– ಯೌವನಸ್ಥನೇ, ಏಳು ಎಂದು ನಿನಗೆ ಹೇಳುತ್ತೇನೆ ಅಂದನು. ಅನ್ನುತ್ತಲೇ ಸತ್ತಿದ್ದವನು ಎದ್ದು ಕೂತುಕೊಂಡು ಮಾತಾಡುವದಕ್ಕೆ ತೊಡಗಿದನು.

# ದೇವರ ಆಜ್ಞೆಗಳು

## ಧರ್ಮೋಪದೇಶಕಾಂಡ 5:7–21

ನಾನಲ್ಲದೆ ನಿನಗೆ ಬೇರ ದೇವರುಗಳು ಇರಬಾರದು. ಯಾವ ಮೂರ್ತಿಯನ್ನೂ ಮಾಡಿಕೊಳ್ಳಬಾರದು. ಆಕಾಶದಲ್ಲಾಗಲಿ ಭೂಮಿಯಲ್ಲಾಗಲಿ ಭೂಮಿಯ ಕೆಳಗಣ ನೀರಿನಲ್ಲಾಗಲಿ ಇರುವ ಯಾವದರ ರೂಪವನ್ನೂ ಮಾಡಿಕೊಳ್ಳಬಾರದು. ಅವುಗಳಿಗೆ ಅಡ್ಡಬೀಳಲೂ ಬಾರದು, ಪೂಜೆಮಾಡಲೂ ಬಾರದು. ನಿನ್ನ ದೇವರಾದ ಯೆಹೋವನೆಂಬ ನಾನು ನನಗೆ ಸಲ್ಲತಕ್ಕ ಗೌರವವನ್ನು ಮತ್ತೊಬ್ಬನಿಗೆ ಸಲ್ಲಗೊಡಿಸೆನು ......... ನಿನ್ನ ದೇವರಾದ ಯೆಹೋವನ ಹೆಸರನ್ನು ಅಯೋಗ್ಯಕಾರ್ಯಕ್ಕಾಗಿ ಎತ್ತಬಾರದು. ಯೆಹೋವನು ತನ್ನ ಹೆಸರನ್ನು ಅಯೋಗ್ಯಕಾರ್ಯಕ್ಕಾಗಿ ಎತ್ತುವನನ್ನು ಶಿಕ್ಷಿಸದೆ ಬಿಡುವದಿಲ್ಲ. ನಿನ್ನ ದೇವರಾದ ಯೆಹೋವನು ಆಜ್ಞಾಪಿಸಿದಂತೆ ನೀನು ಸಬ್ಬತ್ ದಿನವನ್ನು ದೇವರ ದಿನವೆಂದು ಆಚರಿಸಬೇಕು. ಆರು ದಿನಗಳಲ್ಲಿ ನೀನು ದುಡಿದು ನಿನ್ನ ಕೆಲಸವನ್ನೆಲ್ಲಾ ಮಾಡಬೇಕು. ಏಳನೆಯ ದಿನವು ನಿನ್ನ ದೇವರಾದ ಯೆಹೋವನಿಗೆ ಮೀಸಲಾದ ವಿಶ್ರಾಂತಿದಿನವಾಗಿದೆ.

ನಿನ್ನ ದೇವರಾದ ಯೆಹೋವನು ಆಜ್ಞಾಪಿಸಿದಂತೆ ನಿನ್ನ ತಂದೆತಾಯಿಗಳನ್ನು ಸನ್ಮಾನಿಸಬೇಕು; ಸನ್ಮಾನಿಸಿದರೆ ನಿನ್ನ ದೇವರಾದ ಯೆಹೋವನು ನಿನಗೆ ಅನುಗ್ರಹಿಸುವ ದೇಶದಲ್ಲಿ ನೀನು ಬಹುಕಾಲ ಇರುವಿ, ಮತ್ತು ನಿನಗೆ ಮೇಲಾಗುವದು.

ನರಹತ್ಯ ಮಾಡಬಾರದು.

ವ್ಯಭಿಚಾರಮಾಡಬಾರದು.

ಕದಿಯಬಾರದು.

ಮತ್ತೊಬ್ಬನ ಮೇಲೆ ಸುಳ್ಳು ಸಾಕ್ಷಿ ಹೇಳಬಾರದು.

ಮತ್ತೊಬ್ಬನ ಹೆಂಡತಿಯನ್ನು ಅಪೇಕ್ಷಿಸಬಾರದು;

ಮತ್ತೊಬ್ಬನ ಹೊಲ ಮನೆ ಗಂಡಾಳು ಹೆಣ್ಣಾಳು ಎತ್ತು ಕತ್ತೆ ಮುಂತಾದ ಯಾವದನ್ನೂ ಆಶಿಸಬಾರದು.

# ನೀನು ದೇವರಿಗೆ ಮರೆಯಾಗಿರಲಾರಿ

### ಲೂಕ 8:17

ಪ್ರಕಾಶಕ್ಕೆ ಬಾರದ ಯಾವ ರಹಸ್ಯವೂ ಇಲ್ಲ; ಮತ್ತು ಗೊತ್ತಾಗದೆ ಬೈಲಿಗೆ ಬಾರದೆ ಇರುವಂಥ ಗುಟ್ಟು ಒಂದೂ ಇಲ್ಲ.

### ಕೀರ್ತನೆ 139:8,12

ಮೇಲಣ ಲೋಕಕ್ಕೆ ಏರಿಹೋದರೆ ಅಲ್ಲಿ ನೀನಿರುತ್ತೀ; ಪಾತಾಳಕ್ಕೆ ಹೋಗಿ ಮಲಗಿಕೊಂಡೇನಂದರೆ ಅಲ್ಲಿಯೂ ನೀನಿರುವಿ. ನಿನಗೆ ಕತ್ತಲೆಯು ಕತ್ತಲೆಯಲ್ಲ; ಇರುಳು ಹಗಲಾಗಿಯೇ ಇರುತ್ತದೆ; ಕತ್ತಲುಬೆಳಕುಗಳೆರಡೂ ನಿನಗೆ ಒಂದೇ.

### ಯೋಬ 34:21,22

ಆತನು ಮನುಷ್ಯನ ಮಾರ್ಗಗಳ ಮೇಲೆ ಕಣ್ಣಿಟ್ಟು ಅವನ ಹೆಜ್ಜೆಗಳನ್ನೆಲ್ಲಾ ನೋಡುವನು. ಅಧರ್ಮಿಗಳು ಅಡಗಿಕೊಳ್ಳುವದಕ್ಕೆ ಅನುಕೂಲವಾದ ಯಾವ ಕತ್ತಲೂ ಯಾವ ಗಾಢಾಂಧಕಾರವೂ ಇರುವದಿಲ್ಲ.

# ಭಕ್ತಿಹೀನರ ನಿತ್ಯ ಶಿಕ್ಷೆ

**2 ಪೇತ್ರ 3:7**

ಆದರೆ ಈಗಿರುವ ಭೂಮ್ಯಾಕಾಶಗಳು ಅದೇ ವಾಕ್ಯದ ಬಲದಿಂದ ಬೆಂಕಿಯ ಮೂಲಕ ನಾಶವಾಗುವದಕ್ಕೆ ಇಡಲ್ಪಟ್ಟಿವೆ; ಮತ್ತು ಭಕ್ತಿಹೀನರ ಶಿಕ್ಷಾವಿಧಿಯೂ ನಾಶವೂ ಉಂಟಾಗುವ ದಿನಕ್ಕಾಗಿ ಆ ಬೆಂಕಿ ಸಿದ್ಧವಾಗಿದೆ.

**ಕೀರ್ತನೆ 9:17**

ದುಷ್ಟರು ಅಂದರೆ ದೇವರನ್ನು ಅಲಕ್ಷ್ಯಮಾಡುವ ಜನಾಂಗಗಳವರೆಲ್ಲಾ ಪಾತಾಳಕ್ಕೆ ಇಳಿದುಹೋಗುವರು.

**ಮತ್ತಾಯ 25:46**

ಮತ್ತು ಇವರು ನಿತ್ಯ ಶಿಕ್ಷೆಗೂ ನೀತಿವಂತರು ನಿತ್ಯ ಜೀವಕ್ಕೂ ಹೋಗುವರು.

**ಮತ್ತಾಯ 13:41, 42**

ಮನುಷ್ಯ ಕುಮಾರನು ತನ್ನ ದೂತರನ್ನು ಕಳುಹಿಸುವನು; ಅವರು ಆತನ ರಾಜ್ಯದೊಳಗಿಂದ ಎಲ್ಲಾ ಕಂಟಕರನ್ನೂ ಅಧರ್ಮಿಗಳನ್ನೂ ಕೂಡಿಸಿ ಬೆಂಕೀಕೊಂಡ ದಲ್ಲಿ ಹಾಕುವರು; ಅಲ್ಲಿ ಗೋಳಾಟವೂ ಕಟಕಟನೆ ಹಲ್ಲುಕಡಿಯೋಣವೂ ಇರುವವು.

# ನ್ಯಾಯತೀರ್ಪು ಮುಂದಿದೆ

**ರೋಮಾಪುರದವರಿಗೆ 14:12**

ಹೀಗಿರಲಾಗಿ ನಮ್ಮಲ್ಲಿ ಪ್ರತಿಯೊಬ್ಬನು ತನ್ನತನ್ನ ವಿಷಯವಾಗಿ ದೇವರ ಮುಂದೆ ಉತ್ತರಕೊಡಬೇಕು.

**1 ಯೋಹಾನ 4:17**

ನ್ಯಾಯತೀರ್ಪಿನ ದಿನದಲ್ಲಿ ನಮಗಿರುವ ಧೈರ್ಯದಲ್ಲಿಯೇ ಆತನ ಪ್ರೀತಿಯು ನಮ್ಮೊಳಗೆ ಸಿದ್ಧಿಗೆ ಬಂತು. ಯಾಕಂದರೆ ಕ್ರಿಸ್ತನು ಎಂಥವನಾಗಿದ್ದಾನೋ ನಾವು ಅಂಥವರಾಗಿಯೇ ಈ ಲೋಕದಲ್ಲಿದ್ದೇವೆ.

**ಅಪೊಸ್ತಲರಕೃತ್ಯಗಳು 17:31**

ಯಾಕಂದರೆ ಆತನು ನಿಷ್ಕರ್ಷೆಮಾಡಿದ ಪುರುಷನ ಕೈಯಿಂದ ನೀತಿಗನುಸಾರವಾಗಿ ಭೂಲೋಕದ ನ್ಯಾಯವಿಚಾರಣೆ ಮಾಡುವದಕ್ಕೆ ಒಂದು ದಿವಸವನ್ನು ಗೊತ್ತು ಮಾಡಿದ್ದಾನೆ. ಅವನನ್ನು ಸತ್ತವರೊಳಗಿಂದ ಎಬ್ಬಿಸಿದ್ದರಲ್ಲಿ ಇದನ್ನು ನಂಬುವದಕ್ಕೆ ಎಲ್ಲರಿಗೂ ಆಧಾರ ಕೊಟ್ಟಿದ್ದಾನೆ ಅಂದನು.

# ಯೇಸು ಕ್ರಿಸ್ತನ ಕೃಪೆ

### ರೋಮಾಪುರದವರಿಗೆ 9:16

ಆದದರಿಂದ ದೇವರ ದಯವು ಮನುಷ್ಯರಿಗೆ ಇಚ್ಛೈಸುವದರಿಂದಾಗಲಿ ಪ್ರಯತ್ನಿಸುವದರಿಂದಾಗಲಿ ದೊರೆಯದೆ ದೇವರು ಕರುಣಿಸುವದರಿಂದಲೇ ದೊರೆಯುತ್ತದೆ.

### 1 ಪ್ರೇತ್ರ 5:5

ದೇವರು ಅಹಂಕಾರಿಗಳನ್ನು ಎದುರಿಸುತ್ತಾನೆ, ದೀನರಿಗಾದರೋ ಕೃಪೆಯನ್ನು ಅನುಗ್ರಹಿಸುತ್ತಾನೆ.

### 2 ಕೊರಿಂಥದವರಿಗೆ 9:15

ವರ್ಣಿಸಲಶಕ್ಯವಾದ ದೇವರ ವರಕ್ಕಾಗಿ ಆತನಿಗೆ ಸ್ತೋತ್ರ.

### 2 ಕೊರಿಂಥದವರಿಗೆ 8:9

ನಮ್ಮ ಕರ್ತನಾದ ಯೇಸು ಕ್ರಿಸ್ತನ ಕೃಪೆಯು ನಿಮಗೆ ಗೊತ್ತಾಗಿದೆಯಲ್ಲಾ; ಆತನು ಐಶ್ವರ್ಯವಂತನಾಗಿದ್ದು ತಾನು ಬಡತನದಲ್ಲಿ ಸೇರುವದರಿಂದ ನೀವು ಐಶ್ವರ್ಯವಂತರಾಗಬೇಕೆಂದು ನಿಮಗೋಸ್ಕರ ಬಡವನಾದನು.

# ಮಾನಸಾಂತರ

## ಅಪೊಸ್ತಲರ ಕೃತ್ಯಗಳು 3:19

ಆದದರಿಂದ ದೇವರು ನಿಮ್ಮ ಪಾಪಗಳನ್ನು ಅಳಿಸಿಬಿಡುವ ಹಾಗೆ ನೀವು ಪಶ್ಚಾತ್ತಾಪಪಟ್ಟು ಆತನ ಕಡೆಗೆ ತಿರುಗಿಕೊಳ್ಳಿರಿ. ತಿರುಗಿದರೆ ದೇವರ ಸನ್ನಿಧಾನದಿಂದ ವಿಶ್ರಾಂತಿಕಾಲಗಳು ಒದಗುತ್ತವೆ.

## ಯೆಹೆಜ್ಕೇಲ 18:31

ನೀವು ಮಾಡುತ್ತಾ ಬಂದಿರುವ ಅಪರಾಧಗಳನ್ನೆಲ್ಲಾ ನಿಮ್ಮಿಂದ ತೊಲಗಿಸಿ ಬಿಟ್ಟು ನಿಮ್ಮ ಹೃದಯವನ್ನೂ ಸ್ವಭಾವವನ್ನೂ ನೂತನಮಾಡಿಕೊಳ್ಳಿರಿ; ಇಸ್ರಾಯೇಲ್ ವಂಶದವರೇ, ನೀವು ಸಾಯಲೇಕೆ?

## ಮತ್ತಾಯ 3:2

ಪರಲೋಕರಾಜ್ಯವು ಸಮೀಪವಾಯಿತು; ದೇವರ ಕಡೆಗೆ ತಿರುಗಿಕೊಳ್ಳಿರಿ.

## ಲೂಕ 13:3

ಹಾಗೆ ಭಾವಿಸಕೂಡದೆಂದು ನಿಮಗೆ ಹೇಳುತ್ತೇನೆ. ದೇವರ ಕಡೆಗೆ ತಿರುಗಿ ಕೊಳ್ಳದಿದ್ದರೆ ನೀವೆಲ್ಲರೂ ಹಾಗೆಯೇ ಹಾಳಾಗಿ ಹೋಗುವಿರಿ.

# ಪಾಪಗಳ ಕ್ಷಮೆ

## ಮತ್ತಾಯ 6:14

ನೀವು ಜನರ ತಪ್ಪುಗಳನ್ನು ಕ್ಷಮಿಸಿದರೆ ಪರಲೋಕದಲ್ಲಿರುವ ನಿಮ್ಮ ತಂದೆಯು ನಿಮ್ಮ ತಪ್ಪುಗಳನ್ನೂ ಕ್ಷಮಿಸುವನು.

## ಯೆಶಾಯ 55:7

ದುಷ್ಟನು ತನ್ನ ದುರ್ಮಾರ್ಗವನ್ನು ಬಿಡಲಿ, ಕೆಡುಕನು ತನ್ನ ದುರಾಲೋಚನೆಗಳನ್ನು ತ್ಯಜಿಸಲಿ; ಯೆಹೋವನ ಕಡೆಗೆ ತಿರುಗಿಕೊಂಡು ಬರಲಿ, ಆತನು ಅವನನ್ನು ಕರುಣಿಸುವನು; ನಮ್ಮ ದೇವರನ್ನು ಆಶ್ರಯಿಸಲಿ, ಆತನು ಮಹಾಕೃಪೆಯಿಂದ ಕ್ಷಮಿಸುವನು.

## ಪ್ರಕಟನೆ 3:20

ಇಗೋ, ಬಾಗಿಲಲ್ಲಿ ನಿಂತುಕೊಂಡು ತಟ್ಟುತ್ತಾ ಇದ್ದೇನೆ; ಯಾವನಾದರೂ ನನ್ನ ಶಬ್ದವನ್ನು ಕೇಳಿ ಬಾಗಿಲನ್ನು ತೆರೆದರೆ ನಾನು ಒಳಗೆ ಬಂದು ಅವನ ಸಂಗಡ ಊಟ ಮಾಡುವೆನು, ಅವನು ನನ್ನ ಸಂಗಡ ಊಟಮಾಡುವನು.

# ಲೋಕದಿಂದ ಪ್ರತ್ಯೇಕಿಸಿಕೊಳ್ಳುವದು

## (ಪ್ರಾಪಂಚಿಕವಾದವುಗಳಿಂದ)

### ಕೊಲೊಸ್ಸೆಯವರಿಗೆ 3:2

ಮೇಲಿರುವಂಥವುಗಳ ಮೇಲೆ ಮನಸ್ಸಿಡಿರಿ, ಭೂಸಂಬಂಧವಾದವುಗಳ ಮೇಲೆ ಇಡಬೇಡಿರಿ.

### 1 ಯೋಹಾನ 2:15,16

ಲೋಕವನ್ನಾಗಲಿ ಲೋಕದಲ್ಲಿರುವವುಗಳನ್ನಾಗಲಿ ಪ್ರೀತಿಸಬೇಡಿರಿ. ಯಾವನಾದರೂ ಲೋಕವನ್ನು ಪ್ರೀತಿಸಿದರೆ ತಂದೆಯ ಮೇಲಣ ಪ್ರೀತಿಯು ಅವನಲ್ಲಿಲ್ಲ. ಲೋಕದಲ್ಲಿರುವ ಶರೀರದಾಶೆ ಕಣ್ಣಿನಾಶೆ ಬದುಕುಬಾಳಿನ ಡಂಬ ಈ ಮೊದಲಾದವುಗಳೆಲ್ಲವು ತಂದೆಯಿಂದ ಹುಟ್ಟದೆ ಲೋಕದಿಂದ ಹುಟ್ಟಿದವುಗಳಾಗಿವೆ.

### ಎಫೆಸದವರಿಗೆ 5:11

ಕತ್ತಲೆಗೆ ಸಂಬಂಧವಾದ ಕೃತ್ಯಗಳಿಂದ ಯಾವ ಪ್ರಯೋಜನವೂ ಬರಲಾರದು; ಅವುಗಳಲ್ಲಿ ಪಾಲುಗಾರರಾಗಿರದೆ ಅವುಗಳನ್ನು ಬೈಲಿಗೆ ತಂದು ಖಂಡಿಸಿರಿ.

# ಹೊಸದಾಗಿ ಹುಟ್ಟುವದು



## 1 ಪೇತ್ರ 1:23

ನೀವು ಪುನರ್ಜನ್ಮಹೊಂದಿದವರಾಗಿದ್ದೀರಲ್ಲಾ; ಆ ಜನ್ಮವು ನಾಶವಾಗುವ ಬೀಜದಿಂದ ಉಂಟಾದದ್ದಲ್ಲ, ನಾಶವಾಗದ ಬೀಜದಿಂದಲೇ ಉಂಟಾದದ್ದು. ಅದು ದೇವರ ಸದಾಜೀವವುಳ್ಳ ವಾಕ್ಯದ ಮೂಲಕವಾಗಿ ಉಂಟಾಯಿತು.

## 1 ಯೋಹಾನ 5:18

ದೇವರಿಂದ ಹುಟ್ಟಿರುವವನು ಪಾಪಮಾಡುವವನಲ್ಲವೆಂಬದು ನಮಗೆ ಗೊತ್ತದೆ. ದೇವರಿಂದ ಹುಟ್ಟಿದಾತನು ಅವನನ್ನು ಕಾಪಾಡುವನು; ಕೆಡುಕನು ಅವನನ್ನು ಹಿಡಿಯುವದಿಲ್ಲ.

## ಯೋಹಾನ 3:3

ಅದಕ್ಕೆ ಯೇಸು – ನಾನು ನಿನಗೆ ನಿಜನಿಜವಾಗಿ ಹೇಳುತ್ತೇನೆ, ಒಬ್ಬನು ಹೊಸದಾಗಿ ಹುಟ್ಟದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು ಅಂದನು.

# ಪಾಪಕ್ಕೆ ಸತ್ತು ಕ್ರಿಸ್ತನಲ್ಲಿ ಎದ್ದು ಬರುವುದು

## ರೋಮಾಪುರದವರಿಗೆ 6:2,11

ಪಾಪದ ಪಾಲಿಗೆ ಸತ್ತವರಾದ ನಾವು ಇನ್ನೂ ಅದರಲ್ಲೇ ಬದುಕುವದು ಹೇಗೆ? ..... ಅದೇ ಪ್ರಕಾರ ನೀವು ಸಹ ನಿಮ್ಮನ್ನು ಕ್ರಿಸ್ತ ಯೇಸುವಿನ ಐಕ್ಯದಿಂದ ಪಾಪದ ಪಾಲಿಗೆ ಸತ್ತವರೂ ದೇವರಿಗಾಗಿ ಜೀವಿಸುವವರೂ ಎಂದು ಎಣಿಸಿ ಕೊಳ್ಳಿರಿ.

## ಕೊಲೊಸ್ಸೆಯವರಿಗೆ 3:1

ಆದಕಾರಣ ನೀವು ಕ್ರಿಸ್ತನೊಂದಿಗೆ ಎಬ್ಬಿಸಲ್ಪಟ್ಟಿರುವದರಿಂದ ಮೇಲಿರುವವುಗಳನ್ನೇ ಹುಡುಕಿರಿ; ಅಲ್ಲಿ ಕ್ರಿಸ್ತನು ದೇವರ ಬಲಗಡೆಯಲ್ಲಿ ಆಸನಾರೂಢ ನಾಗಿದ್ದಾನೆ.

## ಗಲಾತ್ಯದವರಿಗೆ 5:24

ಕ್ರಿಸ್ತ ಯೇಸುವಿನವರು ತಮ್ಮ ಶರೀರಭಾವವನ್ನು ಅದರ ವಿಷಯಾಭಿಲಾಷೆ ಸ್ವೇಚ್ಛಾಭಿಲಾಷೆ ಸಹಿತ ಶಿಲುಬೆಗೆ ಹಾಕಿದವರು.

# ನಿತ್ಯ ಜೀವ

## ಯೋಹಾನ 17:3

ಒಬ್ಬನೇ ಸತ್ಯ ದೇವರಾಗಿರುವ ನಿನ್ನನ್ನೂ ನೀನು ಕಳುಹಿಸಿಕೊಟ್ಟ ಯೇಸು ಕ್ರಿಸ್ತನನ್ನೂ ತಿಳಿಯುವದೇ ನಿತ್ಯ ಜೀವವು.

## ರೋಮಾಪುರದವರಿಗೆ 6:23

ಯಾಕಂದರೆ ಪಾಪವು ಕೊಡುವ ಸಂಬಳ ಮರಣ; ದೇವರ ಉಚಿತಾರ್ಥ ವರವು ನಮ್ಮ ಕರ್ತನಾದ ಕ್ರಿಸ್ತ ಯೇಸುವಿನಲ್ಲಿರುವ ನಿತ್ಯ ಜೀವ.

## ಯೋಹಾನ 3:36

ಆತನ ಮಗನನ್ನು ನಂಬುವವನಿಗೆ ನಿತ್ಯ ಜೀವ ಉಂಟು; ಮಗನಿಗೆ ಒಳಗಾಗದವನು ಜೀವವನ್ನು ಕಾಣುವದೇ ಇಲ್ಲ; ದೇವರ ಕೋಪವು ಅವನ ಮೇಲೆ ನೆಲೆಗೊಂಡಿರುವದು.

## ಯೋಹಾನ 5:24

ನಿಮಗೆ ನಿಜನಿಜವಾಗಿ ಹೇಳುತ್ತೇನೆ, ನನ್ನ ವಾಕ್ಯವನ್ನು ಕೇಳಿ ನನ್ನನ್ನು ಕಳುಹಿಸಿದಾತನನ್ನು ನಂಬುವವನು ನಿತ್ಯ ಜೀವವನ್ನು ಹೊಂದಿದ್ದಾನೆ. ಅವನು ತೀರ್ಪಿಗೆ ಗುರಿಯಾಗುವದಿಲ್ಲ; ಮರಣದಿಂದ ಪಾರಾಗಿ ಜೀವಕ್ಕೆ ಸೇರಿದ್ದಾನೆ.

# ರಕ್ಷಣೆಯ ಭರವಸ

### ಯೆಶಾಯ 32:17

ಧರ್ಮದಿಂದ ಸಮಾಧಾನವು ಫಲಿಸುವದು, ಶಾಂತಿ ನಿರ್ಭಯಗಳು ಧರ್ಮದ ನಿತ್ಯ ಪರಿಣಾಮವಾಗಿರುವವು.

### 1 ಯೋಹಾನ 4:13

ದೇವರು ನಮಗೆ ತನ್ನ ಆತ್ಮದಲ್ಲಿ ಪಾಲನ್ನು ಅನುಗ್ರಹಿಸಿದ್ದರಿಂದಲೇ ನಾವು ಆತನಲ್ಲಿ ನೆಲೆಗೊಂಡಿದ್ದೇವೆಂತಲೂ ಆತನು ನಮ್ಮಲ್ಲಿ ನೆಲೆಗೊಂಡಿದ್ದಾನೆಂತಲೂ ತಿಳಿದುಕೊಳ್ಳುತ್ತೇವೆ.

### ಯೋಹಾನ 14:21

ನನ್ನ ಆಜ್ಞೆಗಳನ್ನು ಹೊಂದಿ ಅವುಗಳನ್ನು ಕೈಕೊಂಡು ನಡೆಯುವವನೇ ನನ್ನನ್ನು ಪ್ರೀತಿಸುವವನು. ನನ್ನನ್ನು ಪ್ರೀತಿಸುವವನು ನನ್ನ ತಂದೆಗೆ ಪ್ರಿಯನಾಗಿರುವನು. ನಾನೂ ಅವನನ್ನು ಪ್ರೀತಿಸಿ ಅವನಿಗೆ ಕಾಣಿಸಿಕೊಳ್ಳುವೆನು ಎಂದು ಹೇಳಿದನು.

# ನಮ್ಮೊಳಗೆ ಜೀವಿಸುವ ಕ್ರಿಸ್ತನು ಸಂತೋಷ ಕೊಡುತ್ತಾನೆ

## ಗಲಾತ್ಯದವರಿಗೆ 2:20

ಕ್ರಿಸ್ತನೊಂದಿಗೆ ಶಿಲುಬೆಗೆ ಹಾಕಿಸಿಕೊಂಡವನಾಗಿದ್ದೇನೆ; ಇನ್ನು ಜೀವಿಸುವವನು ನಾನಲ್ಲ, ಕ್ರಿಸ್ತನು ನನ್ನಲ್ಲಿ ಜೀವಿಸುತ್ತಾನೆ; ಈಗ ಶರೀರದಲ್ಲಿರುವ ನಾನು ಜೀವಿಸುವದು ಹೇಗಂದರೆ ದೇವಕುಮಾರನ ಮೇಲಣ ನಂಬಿಕೆಯಲ್ಲಿಯೇ. ಆತನು ನನ್ನನ್ನು ಪ್ರೀತಿಸಿ ನನಗೋಸ್ಕರ ತನ್ನನ್ನು ಒಪ್ಪಿಸಿಬಿಟ್ಟನು.

## ಕೀರ್ತನೆ 16:11

ನೀನು ನನಗೆ ಜೀವಮಾರ್ಗವನ್ನು ತಿಳಿಯಪಡಿಸುವಿ; ನಿನ್ನ ಸಮ್ಮುಖದಲ್ಲಿ ಪರಿಪೂರ್ಣ ಸಂತೋಷವಿದೆ; ನಿನ್ನ ಬಲಗೈಯಲ್ಲಿ ಶಾಶ್ವತಭಾಗ್ಯವಿದೆ.

## ಯೋಹಾನ 15:11

ನನ್ನಲ್ಲಿರುವ ಆನಂದವು ನಿಮ್ಮಲ್ಲಿಯೂ ಇರಬೇಕೆಂತಲೂ ನಿಮ್ಮ ಆನಂದವು ಪರಿಪೂರ್ಣವಾಗಬೇಕೆಂತಲೂ ಇದನ್ನೆಲ್ಲಾ ನಿಮಗೆ ಹೇಳಿದ್ದೇನೆ.

# ಕರ್ತನಿಗೆ ವಿಧೇಯರಾಗಿರುವದು ಅವಶ್ಯ

## ರೋಮಾಪುರದವರಿಗೆ 6:16

ನೀವು ಯಾವನಿಗೆ ದಾಸರಂತೆ ವಿಧೇಯರಾಗುತ್ತೇವೆಂದು ನಿಮ್ಮನ್ನು ಒಪ್ಪಿಸಿ ಕೊಡುತ್ತೀರೋ ಆ ಯಜಮಾನನಿಗೆ ದಾಸರಾಗಿಯೇ ಇರುವಿರೆಂಬದು ನಿಮಗೆ ಗೊತ್ತಿಲ್ಲವೋ? ಪಾಪಕ್ಕೆ ದಾಸರಾದರೆ ಮರಣವೇ ಫಲ; ನಂಬಿಕೆಯೆಂಬ ವಿಧೇಯತ್ವಕ್ಕೆ ದಾಸರಾದರೆ ನೀತಿಯೇ ಫಲ.

## 2 ಥೆಸಲೋನಿಕದವರಿಗೆ 1:7–8

ಯಾವಾಗ ಕೊಡುವನಂದರೆ ಯೇಸು ಕರ್ತನು ತನ್ನ ಶಕ್ತಿಯನ್ನು ತೋರ್ಪಡಿಸುವ ದೇವದೂತರಿಂದ ಕೂಡಿದವನಾಗಿ ಉರಿಯುವ ಬೆಂಕಿಯಲ್ಲಿ ಆಕಾಶದಿಂದ ಪ್ರತ್ಯಕ್ಷನಾಗುವ ಕಾಲದಲ್ಲಿ ಅದನ್ನು ಕೊಡುವನು. ಆಗ ನಮ್ಮ ಕರ್ತನಾದ ಯೇಸುವು ದೇವರನ್ನರಿಯದವರಿಗೂ ತನ್ನ ಸುವಾರ್ತೆಗೆ ಒಳಪಡದವರಿಗೂ ಪ್ರತೀಕಾರವನ್ನು ಸಲ್ಲಿಸುವನು.

# ಕ್ರಿಸ್ತನ್ನು ಒಪ್ಪಿಕೊಳ್ಳುವದು ಅವಶ್ಯ

## ರೋಮಾಪುರದವರಿಗೆ 10:9,10

ನೀನು ಯೇಸುವನ್ನೇ ಕರ್ತನೆಂದು ಬಾಯಿಂದ ಅರಿಕೆಮಾಡಿಕೊಂಡು ದೇವರು ಆತನನ್ನು ಸತ್ತವರೊಳಗಿಂದ ಎಬ್ಬಿಸಿದನೆಂದು ಹೃದಯದಿಂದ ನಂಬಿದರೆ ನಿನಗೆ ರಕ್ಷಣೆಯಾಗುವದು ಎಂಬದೇ, ಹೃದಯದಿಂದ ನಂಬುವದರ ಮೂಲಕ ನೀತಿಯು ದೊರಕುತ್ತದೆ, ಬಾಯಿಂದ ಅರಿಕೆಮಾಡುವದರ ಮೂಲಕ ರಕ್ಷಣೆಯಾಗುತ್ತದೆ.

## ಮತ್ತಾಯ 10:32,33

ಹಾಗಾದರೆ ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನೆಂದು ಒಪ್ಪಿಕೊಳ್ಳುವನೋ, ನಾನು ಸಹ ಅವನನ್ನು ನನ್ನವನೆಂದು ಪರಲೋಕದಲ್ಲಿರುವ ನನ್ನ ತಂದೆಯ ಮುಂದೆ ಒಪ್ಪಿಕೊಳ್ಳುವೆನು. ಆದರೆ ಯಾವನು ಮನುಷ್ಯರ ಮುಂದೆ ತಾನು ಯೇಸುವಿನವನಲ್ಲವೆಂದು ಹೇಳುವನೋ ಅವನನ್ನು ನಾನು ಸಹ ಪರಲೋಕದಲ್ಲಿರುವ ನನ್ನ ತಂದೆಯ ಮುಂದೆ ನನ್ನ ವನಲ್ಲವೆಂದು ಹೇಳುವೆನು.

# ಸೈತಾನನು ನಮ್ಮ ಕಡುಶತ್ರು

## ಎಫೆಸದವರಿಗೆ 6:11

ಸೈತಾನನ ತಂತ್ರೋಪಾಯಗಳನ್ನು ನೀವು ಎದುರಿಸಿ ನಿಲ್ಲುವದಕ್ಕೆ ಶಕ್ತರಾಗುವಂತೆ ದೇವರು ದಯಪಾಲಿಸುವ ಸರ್ವಾಯುಧಗಳನ್ನು ಧರಿಸಿಕೊಳ್ಳಿರಿ.

## 1 ಪ್ರೇತ್ರ 5:8

ಸ್ವಸ್ಥಚಿತ್ತರಾಗಿರಿ, ಎಚ್ಚರವಾಗಿರಿ; ನಿಮ್ಮ ವಿರೋಧಿಯಾಗಿರುವ ಸೈತಾನನು ಗರ್ಜಿಸುವ ಸಿಂಹದೋಪಾದಿಯಲ್ಲಿ ಯಾರನ್ನು ನುಂಗಲಿ ಎಂದು ಹುಡುಕುತ್ತಾ ತಿರುಗುತ್ತಾನೆ.

## ಮತ್ತಾಯ 4:1, 10, 11

ಆಗ ಯೇಸು ಸೈತಾನನಿಂದ ಶೋಧಿಸಲ್ಪಡುವದಕ್ಕಾಗಿ ಆತ್ಮನು ಆತನನ್ನು ಆಡವಿಗೆ ಒಯ್ದನು. ಯೇಸು ಅವನಿಗೆ–ಸೈತಾನನೇ ನೀನು ತೊಲಗಿಹೋಗು. ನಿನ್ನ ದೇವರಾಗಿರುವ ಕರ್ತನಿಗೆ ಅಡ್ಡಬಿದ್ದು ಆತನೊಬ್ಬನನ್ನೇ ಆರಾಧಿಸಬೇಕು ಎಂಬದಾಗಿ ಬರೆದದೆ ಎಂದು ಹೇಳಿದನು. ಆಗ ಸೈತಾನನು ಆತನನ್ನು ಬಿಟ್ಟುಬಿಟ್ಟನು. ಮತ್ತು ದೇವದೂತರು ಬಂದು ಆತನಿಗೆ ಉಪಚಾರ ಮಾಡಿದರು.

# ಸೈತಾನನ ಮೇಲೆ ಜಯ

## 2 ಥೆಸಲೋನಿಕದವರಿಗೆ 2:8

ಅವನು ತೆಗೆದುಬಿಡಲ್ಪಟ್ಟ ಕೂಡಲೆ ಆ ಅಧರ್ಮಸ್ವರೂಪನು ಕಾಣಬರುವನು; ಅವನನ್ನು ಯೇಸು ಕರ್ತನು ತನ್ನ ಬಾಯ ಉಸುರಿನಿಂದ ಕೊಲ್ಲುವನು, ತನ್ನ ಪ್ರತ್ಯಕ್ಷತೆಯ ಪ್ರಕಾಶದಿಂದ ಸಂಹರಿಸುವನು.

## ಯಾಕೋಬ 4:7,8

ಹೀಗಿರಲಾಗಿ ದೇವರಿಗೆ ಒಳಗಾಗಿರಿ. ಸೈತಾನನನ್ನು ಎದುರಿಸಿರಿ. ಅವನು ನಿಮ್ಮನ್ನು ಬಿಟ್ಟು ಓಡಿಹೋಗುವನು. ದೇವರ ಸಮೀಪಕ್ಕೆ ಬನ್ನಿರಿ. ಆಗ ಆತನು ನಿಮ್ಮ ಸಮೀಪಕ್ಕೆ ಬರುವನು.

## 1 ಯೋಹಾನ 3:8

ಪಾಪ ಮಾಡುವವನು ಸೈತಾನನಿಂದ ಹುಟ್ಟಿದವನಾಗಿದ್ದಾನೆ; ಆದಿಯಿಂದಲೂ ಸೈತಾನನು ಪಾಪಮಾಡುವವನಾಗಿದ್ದಾನಲ್ಲಾ, ಸೈತಾನನ ಕೆಲಸಗಳನ್ನು ಲಯ ಮಾಡುವದಕ್ಕೋಸ್ಕರವೇ ದೇವಕುಮಾರನು ಪ್ರತ್ಯಕ್ಷನಾದನು.

# ಶಿಷ್ಯತನವನ್ನು ಪರೀಕ್ಷಿಸುವ ಪ್ರೀತಿ

## ಯೋಹಾನ 13:35

ನಿಮ್ಮೊಳಗೆ ಒಬ್ಬರ ಮೇಲೊಬ್ಬರಿಗೆ ಪ್ರೀತಿಯಿದ್ದರೆ ಎಲ್ಲರೂ ನಿಮ್ಮನ್ನು ನನ್ನ ಶಿಷ್ಯರೆಂದು ತಿಳುಕೊಳ್ಳುವರು ಅಂದನು.

## 1 ಯೋಹಾನ 4:20

ಒಬ್ಬನು ತಾನು ದೇವರನ್ನು ಪ್ರೀತಿಸುತ್ತೇನೆಂದು ಹೇಳಿ ತನ್ನ ಸಹೋದರನನ್ನು ದ್ವೇಷಿಸಿದರೆ ಅವನು ಸುಳ್ಳುಗಾರನಾಗಿದ್ದಾನೆ. ತಾನು ಕಂಡಿರುವ ಸಹೋದರನನ್ನು ಪ್ರೀತಿಸದವನು ತಾನು ಕಾಣದಿರುವ ದೇವರನ್ನು ಪ್ರೀತಿಸಲಾರನು.

## ಗಲಾತ್ಯದವರಿಗೆ 5:22, 23

ಆದರೆ ದೇವರಾತ್ಮನಿಂದ ಉಂಟಾಗುವ ಫಲವೇನಂದರೆ-ಪ್ರೀತಿ ಸಂತೋಷ ಸಮಾಧಾನ ದೀರ್ಘಶಾಂತಿ ದಯೆ ಉಪಕಾರ ನಂಬಿಕೆ ಸಾಧುತ್ವ ಶಮೆದಮೆ ಇಂಥವುಗಳೇ. ಇಂಥವುಗಳನ್ನು ಯಾವ ಧರ್ಮಶಾಸ್ತ್ರವೂ ಆಕ್ಷೇಪಿಸುವದಿಲ್ಲ.

# ಯೇಸು ಕ್ರಿಸ್ತನ ಪುನರುತ್ಥಾನ



ದೇವರು ಆತನನ್ನು ನಮ್ಮ ಅಪರಾಧಗಳ ನಿಮಿತ್ತ ಮರಣಕ್ಕೆ ಒಪ್ಪಿಸಿಕೊಟ್ಟು ನಮಗೆ ನೀತಿವಂತರೆಂಬ ನಿರ್ಣಯವು ಉಂಟಾಗುವ ನಿಮಿತ್ತ ಜೀವದಿಂದ ಎಬ್ಬಿಸಿದನು. — **ರೋಮಾಪುರದವರಿಗೆ 4:25**

ಎಂಟು ದಿವಸಗಳಾದ ಮೇಲೆ ಆತನ ಶಿಷ್ಯರು ತಿರಿಗಿ ಒಳಗಿದ್ದಾಗ ತೋಮನೂ ಅವರ ಸಂಗಡ ಇದ್ದನು. ಬಾಗಲುಗಳು ಮುಚ್ಚಿದ್ದವು. ಆಗ ಯೇಸು ಬಂದು ನಡುವೆ ನಿಂತು–ನಿಮಗೆ ಸಮಾಧಾನವಾಗಲಿ ಅಂದನು. ಆ ಮೇಲೆ ತೋಮನಿಗೆ– ನಿನ್ನ ಬೆರಳನ್ನು ಈ ಕಡೆ ಚಾಚಿ ನನ್ನ ಕೈಗಳನ್ನು ಮುಟ್ಟಿನೋಡು; ನಿನ್ನ ಕೈಚಾಚಿ ನನ್ನ ಪಕ್ಕೆಯಲ್ಲಿ ಹಾಕು; ನಂಬದವನಾಗಿರಬೇಡ, ನಂಬುವವನಾಗು ಎಂದು ಹೇಳಿದನು. ತೋಮನು ಆತನಿಗೆ – ನನ್ನ ಸ್ವಾಮಿ, ನನ್ನ ದೇವರು! ಎಂದು ಹೇಳಿದನು.

— **ಯೋಹಾನ 20:26–28**

# ಪುನರುತ್ಥಾನವು ನಮ್ಮ ಮಹಿಮೆಯ ನಿರೀಕ್ಷೆ

## ರೋಮಾಪುರದವರಿಗೆ 6:3-5

ಕ್ರಿಸ್ತ ಯೇಸುವಿನಲ್ಲಿ ಸೇರುವದಕ್ಕೆ ದೀಕ್ಷಾಸ್ನಾನ ಮಾಡಿಸಿಕೊಂಡವರಾದ ನಾವೆಲ್ಲರು ಆತನ ಮರಣದಲ್ಲಿ ಪಾಲುಗಾರರಾಗುವದಕ್ಕೆ ದೀಕ್ಷಾಸ್ನಾನ ಮಾಡಿಸಿ ಕೊಂಡೆವೆಂದು ನಿಮಗೆ ತಿಳಿಯದೋ? ಹೀಗಿರಲಾಗಿ ನಾವು ದೀಕ್ಷಾಸ್ನಾನ ಮಾಡಿಸಿ ಕೊಂಡಾಗ ಆತನ ಮರಣದಲ್ಲಿ ಪಾಲುಗಾರರಾಗಿ ಆತನೊಂದಿಗೆ ಹೂಣಲ್ಪಟ್ಟೆವು. ಆದದರಿಂದ ಕ್ರಿಸ್ತನು ಸತ್ತು ತಂದೆಯ ಮಹಿಮೆಯಿಂದ ಜೀವಿತನಾಗಿ ಎಬ್ಬಿಸಲ್ಪಟ್ಟಂತೆಯೇ ನಾವು ಕೂಡ ಜೀವದಿಂದೆದ್ದು ಹೊಸಬರಾಗಿ ನಡಕೊಳ್ಳಬೇಕು. ಹೇಗಂದರೆ ನಾವು ಆತನ ಮರಣಕ್ಕೆ ಸದೃಶನಾದ ಮರಣವನ್ನು ಹೊಂದಿ ಆತನಲ್ಲಿ ಐಕ್ಯವಾಗಿದ್ದರೆ ಆತನ ಪುನರುತ್ಥಾನಕ್ಕೆ ಸದೃಶವಾದ ಪುನರುತ್ಥಾನವನ್ನು ಹೊಂದಿ ಆತನಲ್ಲಿ ಐಕ್ಯವಾಗುವೆವು.

# ಪರಿಶುದ್ಧತ್ವವು ಕರ್ತನಿಗೆ

## ಮತ್ತಾಯ 3:11

ನಾನಂತೂ ನಿಮ್ಮ ಮನಸ್ಸು ತಿರುಗಿಕೊಳ್ಳಬೇಕೆಂಬದಕ್ಕೆ ನಿಮಗೆ ನೀರಿನಲ್ಲಿ ಸ್ನಾನ ಮಾಡಿಸುತ್ತೇನೆ. ಆದರೆ ನನ್ನ ಹಿಂದೆ ಬರುವವನು ನನಗಿಂತ ಶಕ್ತನು; ಆತನ ಕೆರಗಳನ್ನು ಹೊರಲಿಕ್ಕೂ ನಾನು ಯೋಗ್ಯನಲ್ಲ; ಆತನು ಪವಿತ್ರಾತ್ಮನಲ್ಲಿಯೂ ಬೆಂಕಿಯಲ್ಲಿಯೂ ನಿಮಗೆ ಸ್ನಾನಮಾಡಿಸುವನು.

## 1 ಪೇತ್ರ 1:15

ನಿಮ್ಮನ್ನು ಕರೆದಾತನು ಪರಿಶುದ್ಧನಾಗಿರುವ ಪ್ರಕಾರವೇ ನೀವೂ ವಿಧೇಯರಿಗೆ ತಕ್ಕಂತೆ ನಿಮ್ಮ ಎಲ್ಲಾ ನಡವಳಿಕೆಯಲ್ಲಿ ಪರಿಶುದ್ಧರಾಗಿರಿ.

## ಲೂಕ 1:74, 75

ಹೀಗೆ ನಾವು ನಮ್ಮ ವೈರಿಗಳ ಕೈಯಿಂದ ಬಿಡುಗಡೆಹೊಂದಿ ಭಯವಿಲ್ಲದವರಾಗಿದ್ದು ನಮ್ಮ ಜೀವಮಾನದಲ್ಲೆಲ್ಲಾ ನಿರ್ಮಲಚಿತ್ತದಿಂದಲೂ ನೀತಿಯಿಂದಲೂ ತನ್ನ ಸನ್ನಿಧಿಯಲ್ಲಿ ಸೇವೆಮಾಡುವಂತೆ ನಮಗೆ ಅನುಕೂಲಮಾಡಿದ್ದಾನೆ.

# ಆತ್ಮಭರಿತರಾದವರು

## ಅಪೊಸ್ತಲರಕೃತ್ಯಗಳು 4:31

ಹೀಗೆ ಪ್ರಾರ್ಥನೆ ಮಾಡಿದ ಮೇಲೆ ಅವರು ಕೂಡಿದ್ದ ಸ್ಥಳವು ನಡುಗಿತು, ಅವರೆಲ್ಲರು ಪವಿತ್ರಾತ್ಮಭರಿತರಾಗಿ ದೇವರ ವಾಕ್ಯವನ್ನು ಧೈರ್ಯದಿಂದ ಹೇಳುವವರಾದರು.

## ರೋಮಾಪುರದವರಿಗೆ 8:9

ನೀವಾದರೋ ನಿಮ್ಮಲ್ಲಿ ದೇವರ ಆತ್ಮನು ವಾಸವಾಗಿರುವದಾದರೆ ಶರೀರ ಭಾವಾಧೀನರಲ್ಲ, ದೇವರಾತ್ಮನಿಗೆ ಅಧೀನರಾಗಿದ್ದೀರಿ. ಯಾವನಿಗಾದರೂ ಕ್ರಿಸ್ತನ ಆತ್ಮನು ಇಲ್ಲದಿದ್ದರೆ ಅವನು ಕ್ರಿಸ್ತನವನಲ್ಲ.

## ಅಪೊಸ್ತಲರಕೃತ್ಯಗಳು 1:8

ಆದರೆ ಪವಿತ್ರಾತ್ಮ ನಿಮ್ಮ ಮೇಲೆ ಬರಲು ನೀವು ಬಲವನ್ನು ಹೊಂದಿ.......... ಭೂಲೋಕದ ಕಟ್ಟಕಡೆಯ ವರೆಗೂ ನನಗೆ ಸಾಕ್ಷಿಗಳಾಗಿರಬೇಕು ಅಂದನು.

# ಕ್ರೈಸ್ತರಿಗಿರುವ ಆಶ್ಚರ್ಯಕರವಾದ ವಾಗ್ದಾನಗಳು

## ಯೆಶಾಯ 66:2

ಇವುಗಳನ್ನೆಲ್ಲಾ ನನ್ನ ಕೈಯೇ ನಿರ್ಮಿಸಿತು, ಹೌದು, ನನ್ನ ಕೈಯಿಂದಲೇ ಇವುಗಳೆಲ್ಲಾ ಉಂಟಾದವು. ನಾನು ಕಟಾಕ್ಷಿಸುವವನು ಎಂಥವನೆಂದರೆ ದೀನನೂ ಮನಮುರಿದವನೂ ನನ್ನ ಮಾತಿಗೆ ಭಯಪಡುವವನೂ ಆಗಿರುವವನೇ.

## 1 ಪೇತ್ರ 4:12, 13

ಪ್ರಿಯರೇ, ನೀವು ಪರಿಶೋಧನೆಗಾಗಿ ಪುಟಕ್ಕೆ ಹಾಕಲ್ಪಟ್ಟದ್ದಕ್ಕೆ ಆಶ್ಚರ್ಯ ಪಡಬೇಡಿರಿ; ವಿಪರೀತವಾದ ಸಂಗತಿ ಸಂಭವಿಸಿತೆಂದು ಯೋಚಿಸಬೇಡಿರಿ. ಆದರೆ ನೀವು ಎಷ್ಟರ ಮಟ್ಟಿಗೂ ಕ್ರಿಸ್ತನ ಬಾಧೆಗಳಲ್ಲಿ ಪಾಲುಗಾರರಾಗಿದ್ದೀರೋ ಅಷ್ಟರ ಮಟ್ಟಿಗೆ ಸಂತೋಷವುಳ್ಳವರಾಗಿರ್ರಿ; ಆತನ ಮಹಿಮೆಯ ಪ್ರತ್ಯಕ್ಷತೆಯಲ್ಲಿಯೂ ನೀವು ಸಂತೋಷಪಟ್ಟು ಉಲ್ಲಾಸಗೊಳ್ಳುವಿರಿ.

# ಶೋಧಿಸಲ್ಪಡುವವರಿಗೆ ವಾಗ್ದಾನಗಳು

## ರೋಮಾಪುರದವರಿಗೆ 16:20

ಶಾಂತಿದಾಯಕನಾದ ದೇವರು ಶೀಘ್ರವಾಗಿ ಸೈತಾನನನ್ನು ನಿಮ್ಮ ಕಾಲುಗಳ ಕೆಳಗೆ ಹಾಕಿ ತುಳಿಸಿಬಿಡುವನು.

## ಕೀರ್ತನೆ 34:19

ನೀತಿವಂತರಿಗೆ ಸಂಭವಿಸುವ ಕಷ್ಟಗಳು ಅನೇಕವಿದ್ದರೂ ಯೆಹೋವನು ಅವೆಲ್ಲವುಗಳಿಂದ ಅವನನ್ನು ಬಿಡಿಸುತ್ತಾನೆ.

## 1 ಕೊರಿಂಥದವರಿಗೆ 10:13

ಮನುಷ್ಯರು ಸಹಿಸಬಹುದಾದ ಶೋಧನೆಯೇ ಹೊರತು ಬೇರೆ ಯಾವದೂ ನಿಮಗೆ ಸಂಭವಿಸಲಿಲ್ಲ. ದೇವರು ನಂಬಿಗಸ್ತನು; ನಿಮ್ಮ ಶಕ್ತಿಯನ್ನು ಮೀರುವ ಶೋಧನೆಯನ್ನು ನಿಮಗೆ ಬರಗೊಡಿಸದೆ ನೀವು ಅದನ್ನು ಸಹಿಸುವದಕ್ಕೆ ಶಕ್ತರಾಗುವಂತೆ ಶೋಧನೆಯಾಗುತ್ತಲೇ ತಪ್ಪಿಸಿಕೊಳ್ಳುವ ಮಾರ್ಗವನ್ನು ಸಿದ್ಧಮಾಡುವನು.

# ಜಯ ಹೊಂದಿದವರಿಗೆ ವಾಗ್ದಾನಗಳು

**ಪ್ರಕಟನೆ 21:7**

ಜಯಹೊಂದುವವನು ಇವುಗಳಿಗೆ ಬಾಧ್ಯನಾಗುವನು; ನಾನು ಅವನಿಗೆ ದೇವರಾಗಿರುವೆನು, ಅವನು ನನಗೆ ಮಗನಾಗಿರುವನು.

**ಪ್ರಕಟನೆ 3:21**

ನಾನು ಜಯಹೊಂದಿ ನನ್ನ ತಂದೆಯೊಡನೆ ಸಿಂಹಾಸನದಲ್ಲಿ ಕೂತುಕೊಂಡೆನು; ಹಾಗೆಯೇ ಜಯಹೊಂದುವವನನ್ನು ನನ್ನೊಡನೆ ಸಿಂಹಾಸನದಲ್ಲಿ ಕೂತುಕೊಳ್ಳುವಂತೆ ಮಾಡುವೆನು.

**ಪ್ರಕಟನೆ 3:5**

ಜಯಶಾಲಿಗೆ ಹೀಗೆ ಶುಭ್ರವಸ್ತ್ರಗಳನ್ನು ಹೊದಿಸುವರು. ಜೀವಬಾಧ್ಯರ ಪಟ್ಟಿಯಿಂದ ಅವನ ಹೆಸರನ್ನು ನಾನು ಅಳಿಸಿಬಿಡದೆ ಅವನು ನನ್ನವನೆಂದು ನನ್ನ ತಂದೆಯ ಮುಂದೆಯೂ ಆತನ ದೂತರ ಮುಂದೆಯೂ ಒಪ್ಪುವೆನು.

# ತನ್ನ ಪರಿತ್ಯಾಗದ ವಿಷಯ ದೇವರು ನಮ್ಮಕೂಡ ಮಾತಾಡುತ್ತಾನೆ

### ಮತ್ತಾಯ 5:32

ಆದರೆ ನಾನು ನಿಮಗೆ ಹೇಳುವದೇನಂದರೆ-ಹಾದರದ ಕಾರಣದಿಂದಲ್ಲದೆ ತನ್ನ ಹೆಂಡತಿಯನ್ನು ಬಿಟ್ಟುಬಿಡುವವನು ಅವಳು ವ್ಯಭಿಚಾರ ಮಾಡುವದಕ್ಕೆ ಕಾರಣನಾಗುತ್ತಾನೆ. ಮತ್ತು ಗಂಡಬಿಟ್ಟವಳನ್ನು ಮದುವೆಮಾಡಿಕೊಳ್ಳುವವನು ವ್ಯಭಿಚಾರಮಾಡಿದವನಾಗಿದ್ದಾನೆ.

### ಲೂಕ 16:18

ತನ್ನ ಹೆಂಡತಿಯನ್ನು ಬಿಟ್ಟು ಬೇರೊಬ್ಬಳನ್ನು ಮದುವೆಮಾಡಿಕೊಳ್ಳುವ ಪ್ರತಿಯೊಬ್ಬನು ವ್ಯಭಿಚಾರ ಮಾಡುವವನಾಗಿದ್ದಾನೆ; ಮತ್ತು ಗಂಡಬಿಟ್ಟವಳನ್ನು ಮದುವೆಮಾಡಿಕೊಳ್ಳುವವನು ವ್ಯಭಿಚಾರಮಾಡುವವನಾಗಿದ್ದಾನೆ.

# ಕ್ರಿಸ್ತನ ಎರಡನೇ ಬರುವಿಕೆ

## ಪ್ರಕಟನೆ 3:11

ಬೇಗನೆ ಬರುತ್ತೇನೆ; ನಿನಗಿರುವದನ್ನು ಹಿಡಿದುಕೊಂಡಿರು; ನಿನ್ನ ಜಯ ಮಾಲೆಯನ್ನು ಯಾರೂ ಅಪಹರಿಸಬಾರದು.

## ಯೋಹಾನ 14:3

ನಾನು ಹೋಗಿ ನಿಮಗೆ ಸ್ಥಳವನ್ನು ಸಿದ್ಧಮಾಡಿದ ಮೇಲೆ ತಿರಿಗಿ ಬಂದು ನಿಮ್ಮನ್ನು ಕರಕೊಂಡು ಹೋಗಿ ನನ್ನ ಬಳಿಗೆ ಸೇರಿಸಿಕೊಳ್ಳುವೆನು; ಯಾಕಂದರೆ ನಾನಿರುವ ಸ್ಥಳದಲ್ಲಿ ನೀವು ಸಹ ಇರಬೇಕು.

## ಮತ್ತಾಯ 24:30

ಆಗ ಮನುಷ್ಯ ಕುಮಾರನನ್ನು ಸೂಚಿಸುವ ಗುರುತು ಆಕಾಶದಲ್ಲಿ ಕಾಣಬರುವದು. ಆಗ ಭೂಲೋಕದಲ್ಲಿರುವ ಎಲ್ಲಾ ಕುಲದವರು ಎದೆಬಡಕೊಳ್ಳುವರು, ಮತ್ತು ಮನುಷ್ಯ ಕುಮಾರನು ಬಲದಿಂದಲೂ ಬಹು ಮಹಿಮೆಯಿಂದಲೂ ಆಕಾಶದ ಮೇಘಗಳ ಮೇಲೆ ಬರುವದನ್ನು ಕಾಣುವರು.

# ಕ್ರಿಸ್ತನ ಎರಡನೇ ಬರುವಿಕೆ

## ಲೂಕ 12:40

ನೀವು ಸಹ ಸಿದ್ಧವಾಗಿರ್ರಿ. ನೀವು ನೆನಸದ ಗಳಿಗೆಯಲ್ಲಿ ಮನುಷ್ಯ ಕುಮಾರನು ಬರುತ್ತಾನೆ ಅಂದನು.

## ಮತ್ತಾಯ 16:27

ಮನುಷ್ಯ ಕುಮಾರನು ತನ್ನ ತಂದೆಯ ಪ್ರಭಾವದೊಡನೆ ತನ್ನ ದೂತರ ಸಮೇತವಾಗಿ ಬರುವನು; ಆವಾಗ ಆತನು ಒಬ್ಬೊಬ್ಬನಿಗೆ ಅವನವನ ನಡತೆಗೆ ತಕ್ಕ ಫಲವನ್ನು ಕೊಡುವನು.

## 1 ಯೋಹಾನ 3:2

ಪ್ರಿಯರೇ, ಈಗ ದೇವರ ಮಕ್ಕಳಾಗಿದ್ದೇವೆ; ಮುಂದೆ ನಾವು ಏನಾಗುವೆವೋ ಅದು ಇನ್ನು ಪ್ರತ್ಯಕ್ಷವಾಗಲಿಲ್ಲ. ಕ್ರಿಸ್ತನು ಪ್ರತ್ಯಕ್ಷನಾದರೆ ನಾವು ಆತನ ಹಾಗಿರುವೆವೆಂದು ಬಲ್ಲೆವು; ಯಾಕಂದರೆ ಆತನಿರುವ ಪ್ರಕಾರವೇ ಆತನನ್ನು ನೋಡುವೆವು.

# ದೇವರ ಪದ್ಧತಿಗನುಸಾರವಾದ ರಕ್ಷಣೆ

### ನನಗೂ ಒಬ್ಬ ರಕ್ಷಕನು ಬೇಕು

ಎಲ್ಲರೂ ಪಾಪ ಮಾಡಿ ದೇವರ ಮಹಿಮೆಯನ್ನು ಹೊಂದದೆ ಹೋಗಿದ್ದಾರೆ. ರೋಮಾ 3:23

ಆದರೆ ನಿಮ್ಮ ಅಪರಾಧಗಳೇ ನಿಮ್ಮ ದೇವರಿಂದ ನಿಮ್ಮನ್ನು ಅಗಲಿಸುತ್ತಾ ಬಂದಿವೆ; ನಿಮ್ಮ ಪಾಪಗಳೇ ಆತನು ಕೇಳಲಾರದಂತೆ ಆತನ ಮುಖಕ್ಕೆ ಅಡ್ಡವಾಗಿವೆ.

ಯೆಶಾಯ 52:3

### ಕ್ರಿಸ್ತನು ನನಗಾಗಿ ಸತ್ತನು

ಕ್ರಿಸ್ತನು ಸಹ ಅನೀತಿವಂತನಾಗಿದ್ದು ಅನೀತಿವಂತರಿಗೋಸ್ಕರ ಪ್ರಾಣಕೊಟ್ಟು ನಮ್ಮನ್ನು ದೇವರ ಬಳಿಗೆ ಸೇರಿಸುವದಕ್ಕಾಗಿ ಒಂದೇ ಸಾರಿ ಪಾಪನಿವಾರಣಕ್ಕೋಸ್ಕರ ಬಾಧೆಪಟ್ಟು ಸತ್ತನು.

1 ಪೇತ್ರ 3:18

### ನನ್ನ ಪಾಪಗಳಿಂದ ನಾನು ಬದಲಾಗಬೇಕು

ದೋಷಗಳನ್ನು ಮುಚ್ಚಿಕೊಳ್ಳುವವನಿಗೆ ಶುಭವಾಗದು; ಅವುಗಳನ್ನು ಒಪ್ಪಿಕೊಂಡು ಬಿಟ್ಟುಬಿಡುವವನಿಗೆ ಕರುಣೆ ದೊರೆಯುವದು. ಜ್ಞಾನೋಕ್ತಿಗಳು 28:13

ಆದದರಿಂದ ದೇವರು ನಿಮ್ಮ ಪಾಪಗಳನ್ನು ಅಳಿಸಿಬಿಡುವ ಹಾಗೆ ನೀವು ಪಶ್ಚಾತ್ತಾಪಪಟ್ಟು ಆತನ ಕಡೆಗೆ ತಿರುಗಿಕೊಳ್ಳಿರಿ. ಅ.ಕೃ 3:19

### ನಂಬಿಕೆಯಿಂದ ನಾನು ಯೇಸುವನ್ನು ಅಂಗೀಕರಿಸುತ್ತೇನೆ

ಯಾರಾರು ಆತನನ್ನು ಅಂಗೀಕರಿಸಿದರೋ ಅಂದರೆ ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ ಅವರಿಗೆ ದೇವರ ಮಕ್ಕಳಾಗುವ ಅಧಿಕಾರ ಕೊಟ್ಟನು.

ಯೋಹಾನ 1:12

### ನನ್ನ ರಕ್ಷಣೆಯ ಕುರಿತು ನನಗೆ ದೃಢ ನಿಶ್ಚಯವುಂಟು

ಯಾವನು ದೇವರ ಮಗನನ್ನು ಅಂಗೀಕರಿಸಿದ್ದಾನೋ ಅವನಿಗೆ ಆ ಜೀವ ಉಂಟು. 1 ಯೋಹಾನ 5:12

ನನ್ನ ವಾಕ್ಯವನ್ನು ಕೇಳಿ ನನ್ನನ್ನು ಕಳುಹಿಸಿದಾತನನ್ನು ನಂಬುವವನು ನಿತ್ಯಜೀವವನ್ನು ಹೊಂದಿದ್ದಾನೆ. ಅವನು ತೀರ್ಪಿಗೆ ಗುರಿಯಾಗುವದಿಲ್ಲ, ಮರಣದಿಂದ ಪಾರಾಗಿ ಜೀವಕ್ಕೆ ಸೇರಿದ್ದಾನೆ.

ಯೋಹಾನ 5:24

For more information or to request a free Bible study, please write to:

**WMP**
**India Bible Literature**
**67 Beracah Road**
**Kilpauk, Chennai 600 010**